# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 120 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 21-11-2023 ಮಂಗಳವಾರ | ಪುಟ: 4 | ಬೆಲೆ : ರೂ.2-00
Volume - 01 Issue - 120 | Title- Code: KARKAN 28269 | Chitradurga | Date: 21-11-2023 Tuesday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಸಂಚಾರಿ ಆರೋಗ್ಯ ತಪಾಸಣಾ ವಾಹನಕ್ಕೆ ಸಚಿವ ಡಿ. ಸುಧಾಕರ್ ಚಾಲನೆ 2

ಕಾಂಗ್ರೆಸ್ ಸರ್ಕಾರ ಆಡಳಿತದಲ್ಲಿ ರೈತರು ಅತಂತ್ರ: ಸೋಮಗುದ್ದು ರಂಗಸ್ವಾಮಿ 3

ನಿರೌಷಧ ಚಿಕಿತ್ಸಾ ಪದ್ಧತಿ ಚಿತ್ರದುರ್ಗದ ಮನೆಮಾತಾಗಿದೆ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಕನ್ನಡ ರಾಜ್ಯೋತ್ಸವ-ಯೋಗ ಉತ್ಸವ

» ಚಿತ್ರದುರ್ಗ

ಪತಂಜಲಿ ಯೋಗ ಸಮಿತಿ, ಭಾರತ ಸ್ವಾಭಿಮಾನ ಟ್ರಸ್ಟ್, ಮಹಿಳಾ ಪತಂಜಲಿ ಯೋಗ ಸಮಿತಿ, ಯುವ ಭಾರತ್ ಪತಂಜಲಿ ಕಿಸಾನ್ ಸೇವಾ ಸಮಿತಿ ಇವರ ಸಂಯುಕ್ತಾಶ್ರಯದಲ್ಲಿ ಕನ್ನಡ ರಾಜ್ಯೋತ್ಸವ–ಯೋಗ ಉತ್ಸವ ಉಚಿತ ಯೋಗ, ಧ್ಯಾನ ಮತ್ತು ಪ್ರಾಣಾಯಾಮ ತರಬೇತಿ ಶಿಬಿರವನ್ನು ಇದೇ ನವೆಂಬರ್ 21 ರಿಂದ 30 ರವರೆಗೆ 10 ದಿನಗಳ ಶಿಬಿರವನ್ನು ಪ್ರತಿ ನಿತ್ಯ ಬೆಳಿಗ್ಗೆ 5.30 ರಿಂದ 7 ರವರೆಗೆ ಚಿತ್ರದುರ್ಗ ನಗರದ ಚಳ್ಳಕೆರೆ ರಸ್ತೆಯ ಆರ್ಯ ಈಡಿಗ ವಿದ್ಯಾರ್ಥಿ ನಿಲಯದಲ್ಲಿ ಹಮ್ಮಿಕೊಳ್ಳಲಾಗಿದೆ.

ಬಿಎಸ್‌ಟಿ ಜಿಲ್ಲಾಧ್ಯಕ್ಷ ದೇವಾನಂದ ನಾಯ್ಕ್ ಅಧ್ಯಕ್ಷತೆ ವಹಿಸುವರು. ಆರ್ಯ ಈಡಿಗರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಹೆಚ್.ಜೀವನ್, ನಗರಸಭೆ ಸದಸ್ಯೆ ಎಸ್.ಇ.ತಾರಕೇಶ್ವರಿ, ಪತ್ರಕರ್ತ ಟಿ.ತಿಪ್ಪೇಸ್ವಾಮಿ ಉದ್ಘಾಟನೆ ನೆರವೇರಿಸುವರು. ಮುಖ್ಯ ಅತಿಥಿಗಳಾಗಿ ಎನ್.ಎ.ವೆಂಕಟೇಶ್ ರೆಡ್ಡಿ, ಹೆಚ್.ಎ.ರವಿ, ಆರ್.ಲೋಕೇಶ್ ರೆಡ್ಡಿ, ಎನ್. ಆರ್.ಗೋವಿಂದರೆಡ್ಡಿ, ಶೋಭಾ ತಿರುಮಲ ರೆಡ್ಡಿ, ಆರ್.ಎ.ಶ್ರೀರಾಮರೆಡ್ಡಿ, ಡಾ.ಕೆ.ಪಿ.ಮಲ್ಲಪ್ಪ, ಡಾ.ಜಿ.ಡಿ.ರಶ್ಮಿ, ಕೆ.ಆರ್.ವಿಜಯಕುಮಾರ್ ಭಾಗವಹಿಸುವರು. ಯೋಗ ಶಿಕ್ಷಕರಾದ ಜಿ.ಶ್ರೀನಿವಾಸ್, ಎನ್.ಕೆಂಚವೀರಪ್ಪ, ಲಲಿತಾ ಬೇದ್ರೆ ಶಿಬಿರ ನಡೆಸಿಕೊಡುವರು. ಶಿಬಿರಾರ್ಥಿಗಳು ಯೋಗ ತರಬೇತಿಗೆ ಯೋಗ ಮ್ಯಾಟ್ ಅಥವಾ ಜಮಾಖಾನದೊಂದಿಗೆ ಹಾಜರಾಗಬೇಕು. ಹೆಚ್ಚಿನ ಮಾಹಿತಿಗಾಗಿ ಸಂಘಟನಾ ಕಾರ್ಯದರ್ಶಿ ಜೆ.ಎಸ್.ಗುರುಮೂರ್ತಿ ಮೊ–9449145416, ಖಜಾಂಚಿ ನವೀನ್ ಮೊ–9901585905 ಗೆ ಸಂಪರ್ಕಿಸಬಹುದು.

### ಕೌಶಲ್ಯಾಭಿವೃದ್ಧಿ ತರಬೇತಿ: ಸ್ವಯಂ ಸೇವಾ ತರಬೇತಿ ಸಂಸ್ಥೆಗಳಿಂದ ಅರ್ಜಿ

» ಚಿತ್ರದುರ್ಗ

ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದಿಂದ 2023–24ನೇ ಸಾಲಿನಲ್ಲಿ ಮಹಿಳಾ ತರಬೇತಿ ಯೋಜನೆಯಡಿಯಲ್ಲಿನಿರುದ್ಯೋಗಿಮಹಿಳೆಯರಿಗೆ ವಿವಿಧ ರೀತಿಯ ಕೌಶಲ್ಯಾಭಿವೃದ್ಧಿ ತರಬೇತಿ ನೀಡಲು, ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆಯ kaushalkar.com ವೆಬ್ ಸೈಟ್‌ನಲ್ಲಿ ನೋಂದಾಣಿಯಾಗಿರುವ ಮತ್ತು ಕೇಂದ್ರ ಸರ್ಕಾರದಿಂದ ಮಾನ್ಯತೆ ಪಡೆದಿರುವ ಅರ್ಹ ಸ್ವಯಂ ಸೇವಾ ಸಂಸ್ಥೆಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ನ.24 ಅರ್ಜಿ ಸಲ್ಲಿಸಲು ಕೊನೆ ದಿನ. ಆಸಕ್ತ ಸ್ವಯಂ ಸೇವಾ ಸಂಸ್ಥೆಗಳು ಅಗತ್ಯ ದಾಖಲೆಗಳು ಹಾಗೂ ಈ ಹಿಂದೆ ತರಬೇತಿ ನೀಡಿದ ಛಾಯ ಚಿತ್ರಗಳ ಸಹಿತವಾಗಿ ಅರ್ಜಿ ಪ್ರಸ್ತಾವನೆಯನ್ನು ಜಿಲ್ಲಾ ಬಾಲಭವನ ಸ್ಟೇಡಿಯಂ ಹತ್ತಿರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರ ಕಚೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಕಚೇರಿಗೆ ಭೇಟಿ ನೀಡಬಹುದು.

### ನ.30ರಂದು ಜಿ.ಪಂ ಸಭೆ

» ಚಿತ್ರದುರ್ಗ

ಚಿತ್ರದುರ್ಗ ಜಿಲ್ಲಾ ಪಂಚಾಯಿತಿ ಅಕ್ಟೋಬರ್–2023ರ ಮಾಹೆಯ ಅಂತ್ಯದವರೆಗಿನ ಮಾಸಿಕ ಕೆಡಿಪಿ ಸಭೆಯನ್ನು ನ.30 ರಂದು ಮಧ್ಯಾಹ್ನ 2.30ಕ್ಕೆ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ. ಬೆಂಗಳೂರು ವಿಭಾಗದ ಪ್ರಾದೇಶಿಕ ಆಯುಕ್ತರು, ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಮತ್ತು ಜಿ.ಪಂ ಆಡಳಿತಾಧಿಕಾರಿ ಅಮಲಾನ್ ಆದಿತ್ಯ ಬಿಸ್ವಾಸ್ ಸಭೆಯ ಅಧ್ಯಕ್ಷತೆ ವಹಿಸುವರು. ಈ ಹಿನ್ನಲೆಯಲ್ಲಿ ಎಲ್ಲಾ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಪ್ರಗತಿ ವರದಿಗಳೊಂದಿಗೆ ತಪ್ಪದೇ ಸಭೆಗೆ ಹಾಜರಾಗುವಂತೆ ಜಿಲ್ಲಾ ಪಂಚಾಯಿತಿ ಮುಖ್ಯ ಯೋಜನಾಧಿಕಾರಿ ಹಾಗೂ ಜಿಲ್ಲಾ ಮಟ್ಟದ ಕೆಡಿಪಿ ಮಾಸಿಕ ಪ್ರಗತಿ ಪರಿಶೀಲನಾ ಸಮಿತಿ ಸದಸ್ಯ ಕಾರ್ಯದರ್ಶಿ ಸತೀಶ್ ರೆಡ್ಡಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ನ.22 ರಂದು ಶಿಕ್ಷಕರಿಗೆ ಸಹ ಪಠ್ಯ ಸ್ಪರ್ಧೆ

» ಚಿತ್ರದುರ್ಗ

ಕರ್ನಾಟಕ ರಾಜ್ಯ ಶಿಕ್ಷಕರ ಕಲ್ಯಾಣ ನಿಧಿಯ ವತಿಯಿಂದ 2023–24ನೇ ಸಾಲಿಗೆ ಚಿತ್ರದುರ್ಗ ತಾಲ್ಲೂಕಿನ ಮಾನ್ಯತೆ ಹೊಂದಿದ ಶಿಕ್ಷಣ ಸಂಸ್ಥೆಗಳ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರಿಗೆ ಸಹ ಪಠ್ಯ ಚಟುವಟಿಕೆಗಳ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ.

# ಮಧ್ಯಾಹ್ನ ಬಂಧನ ಸಂಜೆ ಬಿಡುಗಡೆ

## ಜೈಲಿನಿಂದ ಮುರುಘಾ ಶ್ರೀ ರಿಲೀಸ್ –ದಾವಣಗೆರೆ ವಿರಕ್ತ ಮಠ ಸೇರಿದ ಮುರುಘಾ ಶ್ರೀ

» ಚಿತ್ರದುರ್ಗ

ಬಂಧನ



ಬಿಡುಗಡೆ



ಪೋಕ್ಸೋ ಪ್ರಕರಣದಲ್ಲಿ ಬಂಧನದಲ್ಲಿದ್ದ ಶಿವಮೂರ್ತಿ ಮುರುಘಾ ಶರಣರು ಕಳೆದ ಐದು ದಿನಗಳ ಹಿಂದೆಯಷ್ಟೆ ಜಾಮೀನಿ ಪಡೆಯುವ ಮೂಲಕ ಬಿಡುಗಡೆ ಭಾಗ್ಯ ದೊರೆತಿತ್ತು. ಆದರೆ ಇಂದು ಮತ್ತೆ ಮುರುಘಾ ಮಠದ ಶಿವಮೂರ್ತಿ ಮುರುಘಾ ಶರಣರನ್ನು ದಾವಣಗೆರೆ ವಿರಕ್ತ ಮಠದಿಂದ ಶರಣರನ್ನು ಪೊಲೀಸರು ಅರೆಸ್ಟ್ ಮಾಡಿ ಚಿತ್ರದುರ್ಗಕ್ಕೆ ಕರೆತಂದಿದ್ದರು. ಎರಡನೇ ಪೋಕ್ಸೋ ಪ್ರಕರಣದಲ್ಲಿ ಜಾಮೀನು ಪಡೆಯದ ಕಾರಣ ಅವರನ್ನ ಜಿಲ್ಲಾ ನ್ಯಾಯಾಲಯದ ಆದೇಶದಂತೆ ಚಿತ್ರದುರ್ಗದ ಗ್ರಾಮಾಂತರ ಠಾಣೆಯಪೊಲೀಸರುಡಿವೈಎಸ್ಪಿನೇತೃತ್ವದಲ್ಲಿ ಮಧ್ಯಾಹ್ನ ಬಂಧಿಸಿದ್ದರು. ಆದರೆ ಈ ಬಂಧನಕ್ಕೆ ಹೈಕೋರ್ಟ್ ತಡೆ ನೀಡಿದೆ. ಮುರುಘಾ ಶರಣರನ್ನ ಚಿತ್ರದುರ್ಗಕ್ಕೆ ಕರೆತಂದಿರುವುದು ಕೋರ್ಟ್ ಆದೇಶದ ಉಲ್ಲಂಘನೆಯಾಗಿದೆ ಎಂದು ಕೋರ್ಟ್ ಪ್ರತಿಪಾದಿಸಿದೆ. ಅಲ್ಲದೆ ತಕ್ಷಣವೇ ಅವರನ್ನು ಬಿಡುಗಡೆ ಮಾಡುವಂತೆ ಹೈಕೋರ್ಟ್ ಆದೇಶ ನೀಡಿವ ಮೂಲಕ ಮುರುಘಾ ಶರಣರು ನಾಳೆ ಬಿಡುಗಡೆಗೊಳ್ಳಲಿದ್ದಾರೆ.

**ಅರೆಸ್ಟ್ ಮಾಡಲು ಆದೇಶ ನೀಡಿದ್ದ ಜಿಲ್ಲಾ ನ್ಯಾಯಾಲಯ:** 2ನೇ ಪೋಕ್ಸೊ ಕೇಸ್ ನಲ್ಲಿ ಜಾಮೀನು ಪಡೆಯದ ಕಾರಣ ಸರ್ಕಾರಿ ಪರ ವಕೀಲರ ಅರ್ಜಿ ಮೇರೆಗೆ ಮುರುಘಾ ಶ್ರೀಗಳ ವಿರುದ್ಧ



ಬಂಧನದ ವಾರೆಂಟ್ ನೀಡಿತ್ತು. ಹಾಗಾಗಿ ದಾವಣಗೆರೆಯ ವಿರಕ್ತಾ ಮಠದಲ್ಲಿದ್ದ ಮುರುಘಾ ಶರಣರನ್ನ ಸೋಮವಾರ ಚಿತ್ರದುರ್ಗ ಪೊಲೀಸರು ಬಂಧಿಸಿ, ಜಿಲ್ಲಾ ನ್ಯಾಯಾಲಯದ ಮುಂದೆ ಹಾಜರು ಪಡಿಸಲಾಗಿತ್ತು. ವಿಚಾರಣೆ ನಡೆಸಿದ ನ್ಯಾಯಾಲಯ ಅವರನ್ನ ಡಿಸೆಂಬರ್ 2ರವರೆಗೆ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿ ಆದೇಶ ಹೊರಡಿಸಿತ್ತು.

**ಹೈಕೋರ್ಟ್ ಆದೇಶ ಉಲ್ಲಂಘನೆ:** ಆದರೆ ಈ ಬಂಧನದ ಆದೇಶದಿಂದ ಹೈಕೋರ್ಟ್ ಆದೇಶದ ಉಲ್ಲಂಘನೆಯಾಗಿದೆ ಎಂದು ಮುರುಘಾ ಶರಣರ ವಕೀಲರು ಅರ್ಜಿ ಸಲ್ಲಿಸಿದ ಬೆನ್ನಲ್ಲೇ ಬಂಧನಕ್ಕೆ ಹೈಕೋರ್ಟ್ ತಡೆಯಾಜ್ಞೆ ನೀಡಿದೆ. ಮೊದಲ ಪೋಕ್ಸೋ ಪ್ರಕರಣದಲ್ಲಿ ಷರತ್ತುಬದ್ಧ ಜಾಮೀನು ನೀಡಿದ್ದ ಹೈಕೋರ್ಟ್, 2ನೇ ಪೋಕ್ಸೋ ಕೇಸ್‌ನಲ್ಲಿ ಬಾಡಿ ವಾರೆಂಟ್ ಇರುವುದರಿಂದ ಜೈಲಿನಲ್ಲಿ ಇರಿಸಲು ಸಾಧ್ಯವಿಲ್ಲ. ಅಲ್ಲದೆ 2ನೇ ಪೋಕ್ಸೋ ಪ್ರಕರಣ ಇನ್ನೂ ವಿಚಾರಣೆ ನಡೆಯುತ್ತಿದೆ ಎಂದು ಬಿಡುಗಡೆಗೆ ಆದೇಶ ನೀಡಿದೆ.

**ತಕ್ಷಣ ಬಿಡುಗಡೆಗೆ ಹೈಕೋರ್ಟ್ ಆದೇಶ:** ಶಿವಮೂರ್ತಿ ಮುರುಘಾ ಶರಣರ ಬಂಧನವಾಗುತ್ತಿದ್ದಂತೆ ಶ್ರೀಗಳ ಪರ ವಕೀಲರು ಬಂಧನದ ವಾರೆಂಟ್ ವಿರುದ್ಧ ಹೈಕೋರ್ಟ್‌ನಲ್ಲಿ ಅರ್ಜಿ ಸಲ್ಲಿಸಿ ತುರ್ತು ವಿಚಾರಣೆಗೆ ಮನವಿ ಮಾಡಿದ್ದರು. ಇದೀಗ ಚಿತ್ರದುರ್ಗ ಜಿಲ್ಲಾ ನ್ಯಾಯಾಲಯ ಬಂಧನ ಆದೇಶಕ್ಕೆ ಹೈಕೋರ್ಟ್ ತಡೆ ನೀಡಿದೆ. ಈ ಕುರಿತು ಹೈಕೋರ್ಟ್ ರಿಜಿಸ್ಟ್ರಾರ್‌ರಿಂದ ಜೈಲಾಧಿಕಾರಿಗೆ ಇ – ಮೇಲ್ ಮೂಲಕ ಮಾಹಿತಿ ನೀಡಲು ಆದೇಶಿಸಲಾಗಿದೆ.

**ಬಿಡುಗಡೆಯಾದ ಶರಣರು :** ಮಂಗಳವಾರ ಮಧ್ಯಾಹ್ನ 2 ನೇ ಪೋಕ್ಸೋ ಪ್ರಕರಣಕ್ಕೆ ಸಂಬಂಧಿಸಿದಂತೆ ಶಿವಮೂರ್ತಿ ಶರಣರನ್ನು ಬಂಧನ ಮಾಡಲಾಗಿತ್ತು. ಆದರೆ ಹೈಕೋರ್ಟ್ ಆದೇಶದ ಬಂಧನೆ ಆದೇಶ ರದ್ದು ಮಾಡಿದ ಹಿನ್ನೆಲೆಯಲ್ಲಿ ಸೋಮವಾರ ರಾತ್ರಿ ಸುಮಾರು 8–30 ಗಂಟೆಗೆ ಶರಣರನ್ನು ಜೈಲಿನಿಂದ ಬಿಡುಗಡೆಗೊಳಿಸಲಾಯಿತು. 2 ನೇ ಪೋಕ್ಸೋ ಪ್ರಕರಣದಲ್ಲಿ ಜಾಮೀನು ಸಹ ದೊರಕಿದೆ ಎಂದು ತಿಳಿದು ಬಂದಿದೆ.

## ಕಾಡುಗೊಲ್ಲರ ಬೇಡಿಕೆ ಈಡೇರಿಸುವಂತೆ ಒತ್ತಾಯಿಸಿ ಪ್ರತಿಭಟನೆ

» ಹೊಸದುರ್ಗ

ಕಾಡುಗೊಲ್ಲ ಜನಾಂಗವು ತನ್ನದೇ ಆದ ಕಟ್ಟುಪಾಡುಗಳೊಂದಿಗೆ ಇಂದಿಗೂ ಸಹ ನಾಗರಿಕ ಸಮಾಜದಿಂದ ದೂರ ಉಳಿದು ಬದುಕುತ್ತಿದೆ. ಇಂತಹ ಬುಡಕಟ್ಟು ಸಂಸ್ಕೃತಿಯನ್ನು ಹೊಂದಿರುವ ಕಾಡುಗೊಲ್ಲ ಜನಾಂಗ ರಾಜಕೀಯವಾಗಿ, ಆರ್ಥಿಕವಾಗಿ ಮತ್ತು ಶೈಕ್ಷಣಿಕವಾಗಿ ತುಂಬಾ ಹಿಂದುಳಿದಿದ್ದು, ಕೂಡಲೇ ಕಾಡುಗೊಲ್ಲ ಸಮುದಾಯದ ವಿವಿಧ ಬೇಡಿಕೆಗಳನ್ನು ಈಡೇರಿಸಬೇಕೆಂದು ಸೋಮವಾರ ಪ್ರತಿಭಟನೆ ನಡೆಸಿ, ತಹಶೀಲ್ದಾರ್ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಪತ್ರ ಸಲ್ಲಿಸಿ, ಒತ್ತಾಯಿಸಲಾಯಿತು.



ಪ್ರತಿಭಟನೆಯನ್ನು ನೇತೃತ್ವ ವಹಿಸಿ ತಾಲೂಕು ಕಾಡುಗೊಲ್ಲ ಸಂಘದ ಅಧ್ಯಕ್ಷ ಟಿ. ರವೀಂದ್ರ ಮಾತನಾಡಿ, ರಾಜ್ಯದ್ಯಂತ ಕಾಡುಗೊಲ್ಲ ಜನಾಂಗ ಹಲವು ದಶಕಗಳಿಂದಲೂ ನಮ್ಮನ್ನು ಪರಿಶಿಷ್ಟ ಪಂಗಡ ಮೀಸಲಾತಿ ಪಟ್ಟಿಗೆ ಸೇರ್ಪಡೆ ಮಾಡಬೇಕೆಂದು ಪ್ರತಿಭಟನೆ ಮೂಲಕ ಒತ್ತಾಯ ಸರ್ಕಾರಗಳಿಗೆ ಮಾಡಲಾಗುತ್ತಿದೆ. ಆದರೆ,ಈವಿಷಯದಲ್ಲಿಸರ್ಕಾರಗಳು ನಿರ್ಲಕ್ಷ್ಯ ವಹಿಸುತ್ತಿರುವುದು ಬೇಸರದ ಸಂಗತಿಯಾಗಿದೆ. ಕೂಡಲೇ ಕಾಡುಗೊಲ್ಲರನ್ನು ಎಸ್ಟಿ ಪಟ್ಟಿಗೆ ಸೇರ್ಪಡೆ ಮಾಡಬೇಕು. ಅಲೆಮಾರಿ ಮತ್ತು ಅರೆ ಅಲೆಮಾರಿ ಪಟ್ಟಿಗೆ ಸೇರಿಸಬೇಕು. ಕೇಂದ್ರ ಸರ್ಕಾರದ ಇತರೆ ಹಿಂದುಳಿದ ಜಾತಿಗಳು ಮೀಸಲಾತಿ ಪಟ್ಟಿಯಲ್ಲಿ ಕಾಡುಗೊಲ್ಲ ಜನಾಂಗವನ್ನು ಸೇರ್ಪಡೆ ಮಾಡಲು ಶಿಫಾರಸ್ಸು ಮಾಡಬೇಕು. ಕಾಡುಗೊಲ್ಲ ಅಭಿವೃದ್ಧಿ ನಿಗಮಕ್ಕೆ ಅಧ್ಯಕ್ಷರು ಹಾಗೂ ಇತರ ನಿರ್ದೇಶಕರು ಮತ್ತು ಸದಸ್ಯರನ್ನು ಕೂಡಲೇ ನೇಮಕ ಮಾಡಬೇಕು. ಜಾತಿ ಮತ್ತು ಆದಾಯ ಹಾಗೂ ಸಿಂಧುತ್ವ ಪ್ರಮಾಣಪತ್ರಗಳನ್ನುವಿಳಂಬವಿಲ್ಲದೆ ವಿತರಿಸಲು ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದರು.


ಪುಟ 2


## ಹೊಳಲ್ಕೆರೆಯಲ್ಲಿ ಕಾಡುಗೊಲ್ಲರನ್ನು ಎಸ್‌ಟಿಗೆ ಸೇರಿಸುವಂತೆ ಪ್ರತಿಭಟನೆ



» ಹೊಳಲ್ಕೆರೆ

ರಾಜ್ಯದಲ್ಲಿರುವ ಕಾಡುಗೊಲ್ಲ ಸಮುದಾಯವನ್ನು ಎಸ್.ಟಿ ಪಟ್ಟಿಗೆ ಸೇರಿಸಬೇಕೆಂದು ಆಗ್ರಹಿಸಿ ತಾಲ್ಲೂಕು ಕಾಡುಗೋಲ್ಲರ ಸಂಘದ ವತಿಯಿಂದ ಪಟ್ಟಣದ ತಾಲೂಕು ಕಚೇರಿ ಎದುರು ಸೋಮವಾರ ಪ್ರತಿಭಟನೆ ಸತ್ಯಾಗ್ರಹ ನಡೆಸಲಾಯಿತು.


ಪುಟ 2


## ಪ್ರಮುಖ ಸುದ್ದಿ

### ಮತದಾರರ ಪಟ್ಟಿ ವೀಕ್ಷಕರಿಂದ ಪರಿಷ್ಕರಣಾ ಕಾರ್ಯದ ಪರಿಶೀಲನಾ ಸಭೆ

# ಮತದಾರರ ಪಟ್ಟಿ ಅರ್ಜಿಗಳ ತ್ವರಿತ ವಿಲೇವಾರಿಗೆ ಸೂಚನೆ

» ಚಿತ್ರದುರ್ಗ

ಜಿಲ್ಲೆಯಲ್ಲಿ ಮತದಾರರ ಪಟ್ಟಿ ಪರಿಷ್ಕರಣಾ ಕಾರ್ಯ ನಡೆದಿದ್ದು, 17 ವರ್ಷ ಹಾಗೂ 18 ವರ್ಷ ತುಂಬಿರುವ ಎಲ್ಲ ಯುವ ಮತದಾರರನ್ನು ಮತದಾರರ ಪಟ್ಟಿಗೆ ಸೇರ್ಪಡೆಗೊಳಿಸಲು ಹಮ್ಮಿಕೊಳ್ಳಲಾಗುವ ಕಾರ್ಯಗಳ ಕುರಿತು ಕ್ರಿಯಾ ಯೋಜನೆ ರೂಪಿಸಿ ಸಲ್ಲಿಸಬೇಕು ಎಂದು ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆ ಕಾರ್ಯದರ್ಶಿ ಹಾಗೂ ಚಿತ್ರದುರ್ಗ ಜಿಲ್ಲೆಗೆ ಮತದಾರರ ಪಟ್ಟಿ ವೀಕ್ಷಕರಾಗಿರುವ ಡಾ. ಶಮ್ಲಾ ಇಕ್ಬಾಲ್ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಮತದಾರರ ಪಟ್ಟಿ ಸಂಕ್ಷಿಪ್ತ ಪರಿಷ್ಕರಣೆ ಕಾರ್ಯಕ್ರಮ ಸಂಬಂಧ ಎಲ್ಲ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಹಾಗೂ ವಿವಿಧ ಅಧಿಕಾರಿಗಳೊಂದಿಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಜರುಗಿದ ಸಭೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯಕ್ರಮದ ವೇಳಾಪಟ್ಟಿಯಂತೆ ಮತದಾರರ ಪಟ್ಟಿಗೆ ಹೆಸರು ಸೇರ್ಪಡೆ, ತಿದ್ದುಪಡಿ, ಸ್ಥಳಾಂತರ ಸೇರಿದಂತೆ ವಿವಿಧ ಹಕ್ಕು ಮತ್ತು ಆಕ್ಷೇಪಣೆ ಸಂಬಂಧದ



ಅರ್ಜಿ ನಮೂನೆ ಸಲ್ಲಿಸಲು ಡಿಸೆಂಬರ್ 09 ರವರೆಗೂ ಕಾಲಾವಕಾಶ ನೀಡಲಾಗಿದೆ. ಕಳೆದ ಜನವರಿ 1 ರಿಂದ ಅಕ್ಟೋಬರ್ 27 ರವರೆಗಿನ ಅಂಕಿ ಅಂಶದ ಪ್ರಕಾರ ಜಿಲ್ಲೆಯಲ್ಲಿ ಒಟ್ಟು 46906 ಯುವ ಮತದಾರರನ್ನು ಮತದಾರರ ಪಟ್ಟಿಗೆ ಸೇರ್ಪಡೆಗೊಳಿಸಲಾಗಿದೆ ಎಂದರು.

ಅ. 27 ರಿಂದ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯಕ್ರಮ ಪ್ರಾರಂಭಗೊಂಡಿದ್ದು, 2006 ರ ಡಿಸೆಂಬರ್ 31 ರವರೆಗೆ ಜನಿಸಿದವರು ಮತದಾರರ ಪಟ್ಟಿಗೆ ಹೆಸರು ಸೇರಿಸಲು ಅರ್ಜಿ ಸಲ್ಲಿಸಲು ಅರ್ಹರಿದ್ದು, ಅಧಿಕಾರಿಗಳು ಕೇವಲ 18 ವರ್ಷ ಪೂರ್ಣಗೊಂಡವರಿಗೆ ಆದ್ಯತೆ ನೀಡುವುದರ ಜೊತೆ ಜೊತೆಗೆ 17 ವರ್ಷ ಪೂರ್ಣಗೊಂಡವರನ್ನೂ ಕೂಡ ಮತದಾರರ ಪಟ್ಟಿಗೆ ಹೆಸರು ಸೇರ್ಪಡೆಗೊಳಿಸಲು ನಮೂನೆ–06 ಅರ್ಜಿ ಪಡೆದು, ಪ್ರಕ್ರಿಯೆ ಪ್ರಾರಂಭಿಸಬೇಕು ಎಂದು ತಿಳಿಸಿದರು.

ಜಿಲ್ಲೆಯ ಎಲ್ಲ ಕಾಲೇಜುಗಳು, ಐಟಿಐ, ಪಾಲಿಟೆಕ್ನಿಕ್, ಇಂಜಿನಿಯರಿಂಗ್, ಪದವಿ, ಸ್ನಾತಕೋತ್ತರ ಪದವಿ ಸೇರಿದಂತೆ ಎಲ್ಲ ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಗೆ ಜಾಗೃತಿ ಮೂಡಿಸಬೇಕು, ಹಾಗೂ ಆಯಾ ಕಾಲೇಜುಗಳಹಂತದಲ್ಲಿಯೇಅರ್ಜಿಗಳನ್ನು ವಿದ್ಯಾರ್ಥಿಗಳಿಂದ ಪಡೆಯಲು ಕ್ರಮ ಕೈಗೊಳ್ಳಬೇಕು. ಜಿಲ್ಲೆಗೆ ಪ್ರಸಕ್ತ ಪರಿಷ್ಕರಣಾ ಅವಧಿಯಲ್ಲಿ 22 ಸಾವಿರ ಯುವ ಮತದಾರರನ್ನು ಸೇರ್ಪಡೆಗೊಳಿಸುವ ಗುರಿ ಇದ್ದು, ಇದನ್ನು ಸಾಧಿಸಲು ಆಯಾ ತಾಲ್ಲೂಕು ಪಂಚಾಯತಿ ಕಾರ್ಯ ನಿರ್ವಾಹಕ ಅಧಿಕಾರಿಗಳನ್ನು ನೋಡಲ್ ಅಧಿಕಾರಿಯನ್ನಾಗಿ ನೇಮಿಸಲಾಗಿದೆ. ಹೀಗಾಗಿ ಗುರಿ ಸಾಧನೆಗೆ ಕೈಗೊಳ್ಳಲಾಗುವ ಕಾರ್ಯಕ್ರಮಗಳ ಕುರಿತು ಕ್ರಿಯಾ ಯೋಜನೆ ರೂಪಿಸಿ, ಕೂಡಲೆ ಸಲ್ಲಿಸಬೇಕು, ನಿರ್ಲಕ್ಷ್ಯ ತೋರಿದಲ್ಲಿ ಶಿಸ್ತು ಕ್ರಮ ಜರುಗಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ಅರ್ಜಿಗಳ ತ್ವರಿತ ವಿಲೇವಾರಿಗೆ ಸೂಚನೆ: ಕಳೆದ ಅಕ್ಟೋಬರ್ 27 ಕ್ಕೂ ಪೂರ್ವದಲ್ಲಿ ಮತದಾರರ ಪಟ್ಟಿಗೆ ಹೆಸರು ಸೇರ್ಪಡೆ, ತಿದ್ದುಪಡಿ ಮುಂತಾದವುಗಳಿಗ ಸಲ್ಲಿಸಿರುವ ಅರ್ಜಿಗಳ ಪೈಕಿ ಸುಮಾರು 15 ಸಾವಿರಕ್ಕೂ ಹೆಚ್ಚು ಅರ್ಜಿಗಳ ವಿಲೇವಾರಿ ಮಾಡುವುದು ಬಾಕಿ ಉಳಿದಿದ್ದು, ಎಲ್ಲ ತಹಸಿಲ್ದಾರರು ಕೂಡಲೆ ಅಂತಹ ಅರ್ಜಿಗಳನ್ನು ಪರಿಶೀಲಿಸಿ, ನಿಯಮಾನುಸಾರ ವಿಲೇವಾರಿ ಮಾಡಬೇಕು, ಇದರ ಜೊತೆಗೆ ಈಗ ನಡೆಯುತ್ತಿರುವ ಪರಿಷ್ಕರಣೆ ಕಾರ್ಯಕ್ರಮದಲ್ಲಿ ಸಲ್ಲಿಕೆಯಾಗುವ ಅರ್ಜಿಗಳನ್ನೂ ಕೂಡ, ಬಿಎಲ್‌ಒ ಗಳಿಂದ ವರದಿ ಪಡೆದು, ಅವುಗಳನ್ನೂ ಕೂಡ ನಿಗದಿತ ಅವಧಿಯೊಳಗೆ ವಿಲೇವಾರಿ ಮಾಡುವಂತೆ ತಹಸೀಲ್ದಾರರಿಗೆ ಸೂಚನೆ ನೀಡಿದರು.


ಪುಟ 2



| ಚಿನ್ನದ ಬೆಲೆ | |
|---|---|
| 91.6 ಕೆಡಿಎಂ (ಗ್ರಾಂ) | 5500 |
| 85 ಕೆಡಿಎಂ (ಗ್ರಾಂ) | 5100 |



| ಬೆಳ್ಳಿ ಬೆಲೆ | |
|---|---|
| ಕೆಜಿ | 63500 |



## ಫಾಸ್ಟ್ ನ್ಯೂಸ್

### ಕಾಡುಗೊಲ್ಲರ ಬೇಡಿಕೆ ಈಡೇರಿಸುವಂತೆ ಒತ್ತಾಯಿಸಿ ಪ್ರತಿಭಟನೆ

» ಮೊದಲ ಪುಟದಿಂದ

ಈ ಪ್ರತಿಭಟನೆಯಲ್ಲಿ ತಾಲೂಕು ಕಾಡುಗೊಲ್ಲ ಸಂಘದ ಗೌರವಾಧ್ಯಕ್ಷ ರಾಮಣ್ಣ, ಜಿಲ್ಲಾ ಕಾಂಗ್ರೆಸ್ ಒಬಿಸಿ ಘಟಕದ ಕಾರ್ಯದರ್ಶಿ ಎಂ.ಮೂರ್ತಿ, ತಾಲೂಕು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಪದ್ಮನಾಭ್, ತಾಲೂಕು ಕಾಡುಗೊಲ್ಲ ಸಂಘದ ಉಪಾಧ್ಯಕ್ಷರಾದ ರಾಮಲಿಂಗಪ್ಪ, ಶ್ರೀನಿವಾಸ್, ಸಂಘಟನಾ ಕಾರ್ಯದರ್ಶಿಗಳಾದ ಕರಿಯಪ್ಪ, ಯಶವಂತ, ಕಾರ್ಯದರ್ಶಿ ಚಿತ್ತಪ್ಪ, ಯುವ ಮುಖಂಡರಾದ ಶ್ರೀನಿವಾಸ ಸಣ್ಣಕಿಟ್ಟದಹಳ್ಳಿ, ಈಶ್ವರ್ ಮತ್ತು ಅಂಜನ್ ಕುಮಾರ್ ಸೇರಿದಂತೆ ಇತರ ಮುಖಂಡರು ಹಾಗೂ ಸಮುದಾಯದ ನೂರಾರು ಬಂಧುಗಳು ಪಾಲ್ಗೊಂಡಿದ್ದರು.

### ಕಾಂತರಾಜ್ ವರದಿಯನ್ನು ಅನುಷ್ಠಾನಗೊಳಿಸಿ

ಬುಡಕಟ್ಟು ಸಂಸ್ಕೃತಿಯನ್ನು ಹೊಂದಿರುವ ಕಾಡುಗೊಲ್ಲ ಸಮುದಾಯ ರಾಜ್ಯದ 12 ಜಿಲ್ಲೆಗಳಲ್ಲಿ, 40 ತಾಲೂಕುಗಳಲ್ಲಿ, 1250ಕ್ಕೂ ಹೆಚ್ಚಿನ ಹಟ್ಟಿಗಳಲ್ಲಿ ವಾಸವಾಗಿದೆ. ನಮ್ಮ ಸಮುದಾಯ ಎಲ್ಲಾ ಕ್ಷೇತ್ರಗಳಲ್ಲಿಯೂ ಹಿಂದುಳಿದೆ. ರಾಜ್ಯದ 6 ಜಿಲ್ಲೆಗಳಲ್ಲಿ ಕಾಡುಗೊಲ್ಲ ಸಮುದಾಯ ಚುನಾವಣೆಯಲ್ಲಿ ನಿರ್ಣಾಯಕವಾಗಿದೆ. ಆದರೆ, ವಿಧಾನಸಭೆ ಮತ್ತು ಲೋಕಸಭಾ ಚುನಾವಣೆಯಲ್ಲಿ ಟಿಕೆಟ್ ನೀಡದೆ ಕಡೆಗಣನೆ ಮಾಡುತ್ತಿರುವುದು ಬೇಸರ ತರಿಸಿದೆ. ಸರ್ಕಾರ ಶೀಘ್ರವೇ ಹಿಂದುಳಿದ ವರ್ಗಗಳ ಆಯೋಗದ ನಿಕಟಪೂರ್ವ ಅಧ್ಯಕ್ಷರಾದ ಡಾ. ಕಾಂತರಾಜು ವರದಿಯನ್ನು ಅನುಷ್ಠಾನಗೊಳಿಸಬೇಕು. ಇದರಿಂದಾಗಿ ಹಿಂದುಳಿದಿರುವ ಕಾಡುಗೊಲ್ಲ ಸಮಾಜಕ್ಕೆ ರಾಜಕೀಯವಾಗಿ ಪ್ರಾತಿನಿಧ್ಯ ಕಲ್ಪಿಸಬೇಕು.

» **ಶ್ರೀನಿವಾಸ್ ಸಣ್ಣಕಿಟ್ಟದಹಳ್ಳಿ**
**ಯುವಮುಖಂಡರು, ಕಾಡುಗೊಲ್ಲ ಸಮಾಜ, ಹೊಸದುರ್ಗ**

### ನ.22ರಂದು ವಿದ್ಯುತ್ ವ್ಯತ್ಯಯ

» **ಚಿತ್ರದುರ್ಗ**

ಚಿತ್ರದುರ್ಗ ವಿಭಾಗ ವ್ಯಾಪ್ತಿಯಲ್ಲಿರುವ 220/66/11 ಕೆ.ವಿ ಚಿತ್ರದುರ್ಗ, 66/11 ಕೆ.ವಿ ಚಿತ್ರದುರ್ಗ, ಹಿರೆಗುಂಟನೂರು, ಭರಮಸಾಗರ, ಸಿರಿಗೆರೆ, ವಿಜಾಪುರ, ಪಂಡರಹಳ್ಳಿ, ಮಾಡನಾಯಕನಹಳ್ಳಿ, ಹೆಚ್‌ಡಿ ಪುರ, ಚಿತ್ರಹಳ್ಳಿ, ಬಾಲೇನಹಳ್ಳಿ, ತುರುವನೂರು, ಜೆ.ಎನ್, ಕೋಟೆ, ಹೊಳಲ್ಕೆರೆ ವಿ.ವಿ ಕೇಂದ್ರಗಳಲ್ಲಿ ತ್ರೈಮಾಸಿಕ ನಿರ್ವಹಣಾ ಕಾರ್ಯಕ್ಕಾಗಿ ವಿ.ವಿ ಕೇಂದ್ರಗಳಿಗೆ ಮಾರ್ಗ ಮುಕ್ತತೆ ನೀಡಬೇಕಾಗಿರುವುದರಿಂದ, ಈ ವಿದ್ಯುತ್ ವಿತರಣಾ ಕೇಂದ್ರಗಳಿಂದ ಸರಬರಾಜಾಗುವ ಎಲ್ಲಾ ಎನ್.ಜೆ.ವೈ ಮತ್ತು ಕೃಷಿ 11 ಕೆ.ವಿ ಮಾರ್ಗಗಳಲ್ಲಿ ನವೆಂಬರ್ 22ರಂದು ಬೆಳಿಗ್ಗೆ 10 ರಿಂದ ಸಂಜೆ 4 ರವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ. ವಿದ್ಯುತ್ ಅಡಚಣೆಯಾಗುವ ಪ್ರದೇಶಗಳು: ಚಿತ್ರದುರ್ಗ ನಗರ, ಹಿರೇಗುಂಟನೂರು, ಭರಮಸಾಗರ, ಸಿರಿಗೆರೆ, ವಿಜಾಪುರ, ಪಂಡರಹಳ್ಳಿ, ಮಾಡನಾಯಕನಹಳ್ಳಿ, ಹೆಚ್‌ಡಿ ಪುರ, ಚಿತ್ರಹಳ್ಳಿ, ಬಾಲೇನಹಳ್ಳಿ, ತುರುವನೂರು, ಜೆ.ಎನ್.ಕೋಟೆ, ಹೊಳಲ್ಕೆರೆ ಮತ್ತು ಸುತ್ತಮುತ್ತಲಿನ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಗ್ರಾಹಕರು ಸಹಕರಿಸಬೇಕು ಎಂದು ಬೆಸ್ಕಾಂ ಕಾರ್ಯನಿರ್ವಾಹಕ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕುಶಲ ಕರ್ಮಿಗಳಿಂದ ಅರ್ಜಿ ಆಹ್ವಾನ

» **ಚಿತ್ರದುರ್ಗ**

ಡಾ. ಬಾಬು ಜಗಜೀವನ ರಾಂ ಅಭಿವೃದ್ಧಿ ನಿಗಮದ ವತಿಯಿಂದ ಜಿಲ್ಲೆಯ ಪರಿಶಿಷ್ಟ ಜಾತಿಗೆ ಸೇರಿದ ಚರ್ಮ ಕುಶಲಕರ್ಮಿಗಳಿಗೆ ಕಡ್ಡಾಯವಾಗಿ ಚರ್ಮಗಾರಿಕೆ ವೃತ್ತಿಯಲ್ಲಿ ತೊಡಗಿಸಿಕೊಂಡಿರುವ ಚರ್ಮಕುಶಲಕರ್ಮಿಗಳಿಗೆ ನಿಗಮದ ವಿವಿಧ ಯೋಜನೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ. ಡಿಸೆಂಬರ್ 19 ಅರ್ಜಿ ಸಲ್ಲಿಸಲು ಕೊನೆ ದಿನ.

ನಿಗಮದ ಯೋಜನೆಗಳಾದ ತರಬೇತಿ ಯೋಜನೆ, ಸ್ವಯಂ ಉದ್ಯೋಗ ಯೋಜನೆ, ಡಾ.ಬಾಬು ಜಗಜೀವನ ರಾಂ ವಸತಿ ಕಾರ್ಯಾಗಾರ ಯೋಜನೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಗಳನ್ನು ಸೇವಾಸಿಂಧು ಪೋರ್ಟಲ್ ಲಿಂಕ್ https://sevasindhuservices.karnataka.gov.in ಮೂಲಕ ಗ್ರಾಮಒನ್ ಅಥವಾ ಕರ್ನಾಟಕ ಒನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಲಿಡ್ಕರ್ ಜಿಲ್ಲಾ ಸಂಯೋಜಕರ ದೂರವಾಣಿ ಸಂಖ್ಯೆ 9480886266 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

### ಸಚಿವರ ಪ್ರವಾಸ

» **ದಾವಣಗೆರೆ**

ಗಣಿ, ಭೂವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್. ಮಲ್ಲಿಕಾರ್ಜುನ್ ಅವರು ನ.21 ರಂದು ಜಿಲ್ಲಾ ಪ್ರವಾಸ ಕೈಗೊಳ್ಳಲಿದ್ದಾರೆ. ನ.21 ರಂದು ಮ.2 ಗಂಟೆಗೆ ಜಗಳೂರಿಗೆ ಆಗಮಿಸಿ ತಾಲ್ಲೂಕು ವ್ಯಾಪ್ತಿಯ ಬರಪರಿಹಾರ ಕಾಮಗಾರಿಗಳು ಹಾಗೂ ಕುಡಿಯುವ ನೀರಿನ ಯೋಜನೆಗಳ ಕುರಿತು ಸ್ಥಳ ಪರಿಶೀಲನೆ ನಡೆಸುವರು.

### ಪೂರ್ವಭಾವಿ ಸಭೆಯಲ್ಲಿ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಸೂಚನೆ

# ಕನಕ ಜಯಂತಿ: ಅರ್ಥಪೂರ್ಣ ಆಚರಣೆ

» **ಚಿತ್ರದುರ್ಗ**

ಕನಕಜಯಂತಿಯನ್ನು ಇದೇ ನವೆಂಬರ್ 30 ರಂದು ಜಿಲ್ಲಾ ಕೇಂದ್ರದಲ್ಲಿ ಸಂಭ್ರಮದಿಂದ ಹಾಗೂ ಅರ್ಥಪೂರ್ಣವಾಗಿ ಆಚರಿಸಲು ಅಗತ್ಯ ಪೂರ್ವಸಿದ್ಧತೆ ಕೈಗೊಳ್ಳುವಂತೆ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಅಧಿಕಾರಿಗಳಿಗೆ ಸೂಚನೆ ನೀಡಿದರು.



ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಕನಕ ಜಯಂತಿ ಆಚರಣೆ ಸಂಬಂಧ ಹಮ್ಮಿಕೊಂಡಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕನಕ ಜಯಂತಿ ಅಂಗವಾಗಿ ನ. 30 ರಂದು ಬೆಳಿಗ್ಗೆ 10ಕ್ಕೆ ನಗರದ ಹೊಳಲ್ಕೆರೆ ರಸ್ತೆಯ ಕನಕ ವೃತ್ತದಿಂದ ಕನಕದಾಸರ ಭಾವಚಿತ್ರದ ಮೆರವಣಿಗೆ ಪ್ರಾರಂಭವಾಗಿ, ಸಂಗೊಳ್ಳಿ ರಾಯಣ್ಣ ವೃತ್ತ, ಗಾಂಧಿವೃತ್ತ, ಎಸ್‌ಬಿಐ ವೃತ್ತ, ಪ್ರವಾಸಿ ಮಂದಿರ ಮಾರ್ಗವಾಗಿ ಅಂಬೇಡ್ಕರ್ ವೃತ್ತ, ಮದಕರಿ ನಾಯಕರ ವೃತ್ತದ ಮೂಲಕ ತರಾಸು ರಂಗಮಂದಿರ ತಲುಪಲಿದೆ. ಅಂದು ಮಧ್ಯಾಹ್ನ 1 ಕ್ಕೆ ನಗರದ ತ.ರಾ.ಸು ರಂಗಮಂದಿರದಲ್ಲಿ ವೇದಿಕೆ ಕಾರ್ಯಕ್ರಮ ನಡೆಯಲಿದೆ. ಡೊಳ್ಳು, ವೀರಗಾಸೆ ಸೇರಿದಂತೆ ವಿವಿಧ ಜಾನಪದ ಕಲಾತಂಡಗಳು ಮೆರವಣಿಗೆಯಲ್ಲಿ ಭಾಗವಹಿಸಲಿವೆ. ಸರ್ಕಾರದ ಶಿಷ್ಟಾಚಾರದ ಅನುಸಾರ ಆಹ್ವಾನ ಪತ್ರಿಕೆ ಮುದ್ರಿಸಿ, ಜನಪ್ರತಿನಿಧಿಗಳನ್ನು ಜಯಂತಿಗೆ ಆಹ್ವಾನಿಸಲಾಗುವುದು ಎಂದರು.

ಆಯಿತೋಳು ವಿರೂಪಾಕ್ಷಪ್ಪ ಮತ್ತು ತಂಡದವರಿಂದ ಕನಕದಾಸರ ಕೀರ್ತನೆಗಳ ಗೀತಗಾಯನ ಹಾಗೂ ಅಕ್ಕಮಹಾದೇವಿ ವಿಶ್ವವಿದ್ಯಾಲಯದ ವಿಶ್ರಾಂತ ಕುಲಪತಿ ಸುನಂದಮ್ಮ ಅವರಿಂದ ಕನಕದಾಸರ ಕುರಿತು ಉಪನ್ಯಾಸ ಕಾರ್ಯಕ್ರಮ ಏರ್ಪಡಿಸಲಾಗುವುದು. ಜಯಂತಿ ಅಂಗವಾಗಿ ಒಂದು ದಿನ ಮುಂಚಿತವಾಗಿ ಕನಕದಾಸರ ಪ್ರತಿಮೆ ಸೇರಿದಂತೆ ನಗರದ ಎಲ್ಲಾ ಪ್ರತಿಮೆ ಹಾಗೂ ವೃತ್ತಗಳಿಗೂ ದೀಪಾಲಂಕಾರ ಹಾಗೂ ಪುಷ್ಪಾಲಂಕಾರ ಮಾಡಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾಡಳಿತದ ವತಿಯಿಂದ ನಡೆಯುವ ಕನಕ ಜಯಂತಿ ಕಾರ್ಯಕ್ರಮಕ್ಕೆ ಸರ್ಕಾರಿ ಅಧಿಕಾರಿಗಳು, ನೌಕರರು ಕಡ್ಡಾಯವಾಗಿ ಭಾಗವಹಿಸಬೇಕು. ಜಯಂತಿ ಅಂಗವಾಗಿ ನಗರ ತರಾಸು ರಂಗಮಂದಿದರಲ್ಲಿ ಪುಸ್ತಕ ಮಾರಾಟ ಮಳಿಗೆ ತೆರೆಯಬೇಕು ಎಂದು ಸೂಚನೆ ನೀಡಿದರು.

**ಸಮಾಜದ ಬೇಡಿಕೆ ಈಡೇರಿಕೆಗೆ ಮನವಿ:** ಕಳೆದ ಬಾರಿಯ ಕನಕ ಜಯಂತಿ ಕಾರ್ಯಕ್ರಮದಲ್ಲಿ ಸಮಾಜದ ವತಿಯಿಂದ ನಿವೇಶನ, ಭವನ ಸೇರಿದಂತೆ ಹಲವು ಬೇಡಿಕೆಗಳನ್ನು ಈಡೇರಿಸುವಂತೆ ಜಿಲ್ಲಾಡಳಿತಕ್ಕೆ ಮನವಿ ಸಲ್ಲಿಸಲಾಗಿದ್ದು, ಇದುವರೆಗೂ ಬೇಡಿಕೆ ಈಡೇರಿಲ್ಲ ಎಂದು ಸಮಾಜದ ಮುಖಂಡರಾದ ಬಿ.ಟಿ.ಜಗದೀಶ್ ಜಿಲ್ಲಾಧಿಕಾರಿಗಳಿಗೆ ಮನವಿ ಮಾಡಿದರು.

ಇದಕ್ಕೆ ಪ್ರತಿಕ್ರಿಯಿಸಿದ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಅವರು, ನಿವೇಶನ, ಭವನ ಸೇರಿದಂತೆ ಸಮಾಜದ ಬೇಡಿಕೆಗಳ ಈಡೇರಿಕೆಗೆ ಆದ್ಯತೆ ಮೇರೆಗೆ ಕ್ರಮ ವಹಿಸಲಾಗುವುದು ಎಂದು ತಿಳಿಸಿದರು.

ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸಾಧನೆ ತೋರಿದ ಕುರುಬ ಸಮಾಜದ ಐವರಿಗೆ ಹಾಗೂ ಇತರೆ ಐವರಿಗೆ ಸಮಾಜದ ವತಿಯಿಂದ ಕನಕ ಜಯಂತಿ ಕಾರ್ಯಕ್ರಮದಲ್ಲಿ ಸನ್ಮಾನ ಮಾಡಲು ಅವಕಾಶ ಮಾಡಿಕೊಡಬೇಕು ಎಂದು ಸಮಾಜದ ಮುಖಂಡರು ಸಭೆಯಲ್ಲಿ ಮನವಿ ಮಾಡಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್, ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ್, ನಗರಸಭೆ ಪೌರಾಯುಕ್ತೆ ರೇಣುಕಾ, ಜಿಲ್ಲಾ ಕುರುಬ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಶ್ರೀರಾಮ್, ನಗರಸಭೆ ಸದಸ್ಯೆ ಪಿ.ಕೆ.ಮೀನಾಕ್ಷಿ, ಸೇರಿದಂತೆ ಸಮಾಜದ ಮುಖಂಡರಾದ ರವಿಶಂಕರ್‌ಬಾಬು, ಕೋಟೆ ಮಂಜಣ್ಣ, ಚಂದ್ರಶೇಖರ್, ಓಂಕಾರಪ್ಪ, ಸುರೇಶ್, ಲೋಕೇಶ್, ಕುಮಾರ್ ಗೌಡ್ರು, ತಿಪ್ಪೇಸ್ವಾಮಿ, ಗುರುಸ್ವಾಮಿ, ಕೃಷ್ಣಮೂರ್ತಿ, ರಜನಿ, ಮುತ್ತುರಾಜ್, ಮಂಜಪ್ಪ, ನಿಶಾನಿ ಜಯಣ್ಣ ಸೇರಿದಂತೆ ಗಣ್ಯರು ಇದ್ದರು.

# ನೋಂದಾಯಿತ ಕಾರ್ಮಿಕರಿಗೆ ಆರೋಗ್ಯ ತಪಾಸಣೆ

## ಸಂಚಾರಿ ಆರೋಗ್ಯ ತಪಾಸಣಾ ವಾಹನಕ್ಕೆ ಸಚಿವ ಡಿ. ಸುಧಾಕರ್ ಚಾಲನೆ

» **ಚಿತ್ರದುರ್ಗ**

ಕಾರ್ಮಿಕ ಇಲಾಖೆ ವತಿಯಿಂದ ನೋಂದಾಯಿತ ಕಟ್ಟಡ ಕಾರ್ಮಿಕರು ಮತ್ತು ಅವರ ಅವಲಂಬಿತರ ಆರೋಗ್ಯ ಸೇವೆಗೆ ಆರಂಭಿಸಿರುವ ಸಂಚಾರಿ ಆರೋಗ್ಯ ತಪಾಸಣಾ ವಾಹನಕ್ಕೆ ಯೋಜನಾ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಚಾಲನೆ ನೀಡಿದರು.



ಹಿರಿಯೂರು ಪಟ್ಟಣದ ನೆಹರು ಮೈದಾನದಲ್ಲಿ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ, ಕಾರ್ಮಿಕ ಇಲಾಖೆ ವತಿಯಿಂದ ನೋಂದಾಯಿತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಿಗೆ ಹಾಗೂ ಅವರ ಅವಲಂಬಿತರಿಗೆ "ಮುನ್ನೆಚ್ಚರಿಕೆ ಆರೋಗ್ಯ ತಪಾಸಣೆ" ಮೊಬೈಲ್ ವಾಹನಕ್ಕೆ ಹಸಿರು ನಿಶಾನೆ ತೋರಿದರು.

ನಂತರ ಮಾತನಾಡಿದ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್, ಕಾರ್ಮಿಕ ಕಲ್ಯಾಣ ಮಂಡಳಿಯ ನೋಂದಾಯಿತ ಕಟ್ಟಡ ಮತ್ತ ಇತರೆ ನಿರ್ಮಾಣ ಕಾರ್ಮಿಕರಿಗೆ ಹಾಗೂ ಅವರ ಅವಲಂಭಿತರಿಗೆ "ಮುನ್ನೆಚ್ಚರಿಕೆ ಆರೋಗ್ಯ ತಪಾಸಣೆ" ಯೋಜನೆಯಡಿ ವೈದ್ಯಕೀಯ ಪರೀಕ್ಷೆ, ಸೇವೆಗಳನ್ನು ತುಮಕೂರಿನ ಮೆ.ಅಶ್ವಿನಿ ಹಾಸ್ಪಿಟಲ್ ಸಂಸ್ಥೆಯವರು ಒದಗಿಸುತ್ತಿದ್ದಾರೆ. ಈ ಸಂಸ್ಥೆಯವರಿಗೆ ಜಿಲ್ಲೆಯ ಆರು ತಾಲ್ಲೂಕಿನ 33,500 ಅರ್ಹ ನೋಂದಾಯಿತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕ ಫಲಾನುಭವಿಗಳಿಗೆ ಆರೋಗ್ಯ ತಪಾಸಣೆಯ ಗುರಿ ನಿಗದಿಪಡಿಸಲಾಗಿದ್ದು, ಎಲ್ಲರೂ ಉಚಿತ ಆರೋಗ್ಯ ತಪಾಸಣೆಯ ಸೌಲಭ್ಯ ಪಡೆಯಬೇಕು ಎಂದು ತಿಳಿಸಿದರು.

ಉಚಿತ ಆರೋಗ್ಯ ತಪಾಸಣಾ ಶಿಬಿರದಲ್ಲಿ ವೈದ್ಯರ ಸಮಾಲೋಚನೆ–ಸಂಪೂರ್ಣ ದೈಹಿಕ ಪರೀಕ್ಷೆ, ಲಿವರ್ ಕಾರ್ಯ ಪರೀಕ್ಷೆ, ಅಡಿಯೋಮೆಟ್ರಿ ಸ್ಕ್ರೀನ್ ಟೆಸ್ಟ್, ದೃಷ್ಟಿ ತಪಾಸಣಾ ಪರೀಕ್ಷೆ, ಸಿಬಿಸಿ ಪರೀಕ್ಷೆ, ಇಎಸ್‌ಆರ್ ಪರೀಕ್ಷೆ, ರಕ್ತದಲ್ಲಿ ಸಕ್ಕರೆ ಪ್ರಮಾಣ ಪರೀಕ್ಷೆ, ಕಿಡ್ನಿ ಕಾರ್ಯ ಪರೀಕ್ಷೆ, ಮಲೇರಿಯಾ ಪ್ಯಾರಸೈಟ್ ಪರೀಕ್ಷೆ, ಮೂತ್ರ ಪರೀಕ್ಷೆ, ರಕ್ತದ ಗಂಪು ಪರೀಕ್ಷೆ ಸೇರಿದಂತೆ ವಿವಿಧ ರೀತಿಯ ಒಟ್ಟು 20 ಪರೀಕ್ಷೆಗಳ ಆರೋಗ್ಯ ತಪಾಸಣೆ ನಡೆಸಲಾಗುವುದು.

ಕಾರ್ಯಕ್ರಮದಲ್ಲಿ ಕಾರ್ಮಿಕ ಅಧಿಕಾರಿ ಇಬ್ರಾಹಿಂ ಸಾಬ್, ಕಾರ್ಮಿಕ ನಿರೀಕ್ಷಕರಾದ ಅಲ್ಲಾಭಕ್ಷ್, ಟಿ.ಕುಸುಮ ಹಾಗೂ ಸಿಬ್ಬಮದಿ ವರ್ಗದವರು, ಜಿಲ್ಲೆಯ ವಿವಿಧ ಕಾರ್ಮಿಕ ಸಂಘಟನೆಗಳ ಮುಖಂಡರು ಹಾಗೂ ತುಮಕೂರಿನ ಅಶ್ವಿನಿ ಆಸ್ಪತ್ರೆ ಸಂಸ್ಥೆಯ ಸಿಬ್ಬಂದಿ ಇದ್ದರು.

### ಹೊಳಲ್ಕೆರೆಯಲ್ಲಿ ಕಾಡುಗೊಲ್ಲರನ್ನು ಎಸ್‌ಟಿಗೆ ಸೇರಿಸುವಂತೆ ಪ್ರತಿಭಟನೆ

» ಮೊದಲ ಪುಟದಿಂದ

**ಸಂಘದ ಬೇಡಿಕೆ :** ರಾಜ್ಯದಲ್ಲಿರುವ ಕಾಡುಗೊಲ್ಲ ಸಮುದಾಯ ಬೇಡಿಕೆಗಳನ್ನು ಈಡೇರಿಸಬೇಕು ಎಂದು ಒತ್ತಾಯಿಸುತ್ತಾ ಪ್ರತಿಭಟನೆ ನಡೆಸುತ್ತಾ ಬಂದಿದೆ. ಬಹಳ ಪ್ರಮುಖವಾಗಿ ಕಾಡುಗೊಲ್ಲರನ್ನು ಎಸ್‌ಟಿ ಪಟ್ಟಿಗೆ ಸೇರಿಸಬೇಕು. ಕಾಡುಗೊಲ್ಲ ಎಂಬ ಜಾತಿ ಪ್ರಮಾಣ ಪತ್ರವನ್ನು ಮತ್ತು ಸಿಂಧುತ್ವ ಪ್ರಮಾಣ ಪತ್ರವನ್ನು ರಾಜ್ಯದ ಎಲ್ಲಾ ತಾಲೂಕು ಕಚೇರಿಗಳಲ್ಲಿ ವಿತರಣೆ ಮಾಡಬೇಕು.

ಶಾಲಾ ದಾಖಲಾತಿಯಲ್ಲಿ ಕಾಡುಗೊಲ್ಲರು ಎಂದು ಸೇರ್ಪಡೆ ಮಾಡಬೇಕು. ಕಾಡುಗೊಲ್ಲರಿಗೆ ಪ್ರತ್ಯೇಕವಾದ ಅಭಿವೃದ್ಧಿ ನಿಗಮವನ್ನು ಸರ್ಕಾರ ತೆರೆಯಬೇಕು. ಕಾಡುಗೊಲ್ಲರಿಗೆ ಪ್ರತ್ಯೇಕ ಜಾತಿಯ ಸ್ಥಾನಮಾನ ನೀಡುವುದರ ಜೊತೆಗೆ ಸರ್ಕಾರದ ಹೆಚ್ಚಿನ ಸೌಲಭ್ಯವನ್ನು ಕಲ್ಪಿಸಿ ಕೊಡಬೇಕು.

ಸರ್ಕಾರದ ವರದಿಯಂತೆ ಜಿಲ್ಲೆಯ ಗೊಲ್ಲರಹಟ್ಟಿಗಳನ್ನು ಕಾಡುಗೊಲ್ಲ, ಅಲೆಮಾರಿ, ಅರೆ ಅಲೆಮಾರಿ ಪಟ್ಟಿಗೆ ಸೇರ್ಪಡೆಗೊಳಿಸಲು ಶಿಫಾರಸ್ಸು ಮಾಡಬೇಕು. ಕಾಡುಗೊಲ್ಲ ಸಮುದಾಯವನ್ನು ಕೇಂದ್ರ ಸರ್ಕಾರದ ಒಬಿಸಿ ಮೀಸಲಾತಿ ಪಟ್ಟಿಯಲ್ಲಿ ಕಾಡುಗೊಲ್ಲ ಸಮುದಾಯ ಎಂದು ಸೇರ್ಪಡೆ ಮಾಡಬೇಕು.

ಬುಡಕಟ್ಟು ಸಂಸ್ಕೃತಿಯ ಕಾಡುಗೊಲ್ಲ ಜನಾಂಗಕ್ಕೆ ಎಸ್‌ಟಿ ಮೀಸಲಾತಿಗೆ ಒಳಪಡಿಸಲು ಕೈಗೊಂಡ ಕುಲ ಶಾಸ್ತ್ರೀಯ ಅಧ್ಯಯನವನ್ನು ರಾಜ್ಯ ಸರ್ಕಾರದ ಶಿಫಾರಸ್ಸಿನ ಮೇಲೆ ಕೇಂದ್ರ ಸರ್ಕಾರ ಕೂಡಲೇ ವರದಿಯನ್ನು ಸ್ವೀಕರಿಸಿ ಕಾಡುಗೊಲ್ಲ ಸಮುದಾಯವನ್ನು ಪರಿಶಿಷ್ಟ ಪಂಗಡಕ್ಕೆ ಸೇರ್ಪಡೆಗೊಳಿಸಬೇಕು.

ಗೊಲ್ಲರಹಟ್ಟಿಗಳನ್ನು ಕಂದಾಯ ಗ್ರಾಮಗಳಾಗಿ ಪರಿವರ್ತಿಸಬೇಕು. ಕಾಡುಗೊಲ್ಲರ ಹಟ್ಟಿಗಳಿಗೆ ನಾಗರಿಕ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಿಕೊಡಲು ಸರ್ಕಾರ ವಿಶೇಷ ಅನುದಾನವನ್ನ ಬಿಡುಗಡೆ ಮಾಡಬೇಕು. ಕಾಡುಗೊಲ್ಲರ ವಿಶೇಷ ಆಚರಣೆಗಳನ್ನು ಸಮುದಾಯದ ಹೆಣ್ಣು ಮಕ್ಕಳ ವಿಶೇಷ ಆಚರಣೆಗಳು, ಮೂಢನಂಬಿಕೆಗಳು, ಆರೋಗ್ಯ ಮತ್ತು ವಿದ್ಯಾಭ್ಯಾಸಕ್ಕೆ ಸರ್ಕಾರವು ಶುಚಿತ್ವ ಮತ್ತು ಶಿಕ್ಷಣದೊಂದಿಗೆ ಅರವಿನೆಡೆಗೆ ಎಂಬ ಕಾರ್ಯಕ್ರಮವನ್ನು ರೂಪಿಸಿ ಸೂಕ್ತ ಅನುದಾನವನ್ನು ಮೀಸಲಿಟ್ಟು ಅನುಷ್ಠಾನಗೊಳಿಸಿ ಜನಾಂಗಕ್ಕೆ ಜಾಗೃತಿ ಮೂಡಿಸಲು ಕ್ರಮ ಕೈಗೊಳ್ಳಬೇಕು ಎಂದು ಸಮುದಾಯದ ಆಗ್ರಪಡಿಸಿದೆ.

ಕಾಡುಗೊಲ್ಲ ಸಮುದಾಯದ ಪ್ರತಿಭಟನಾ ಹಾಗೂ ಧರಣಿ ಕಾರ್ಯಕ್ರಮದಲ್ಲಿ ಮಾಜಿ ಶಾಸಕ ಎವಿ ಉಮಾಪತಿ, ತಾಲೂಕು ಕಾಡುಗೊಲ್ಲ ಸಂಘದ ಅಧ್ಯಕ್ಷ ಎ.ಚಿತ್ತಪ್ಪ, ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಡಿ.ಕೆ. ಶಿವಮೂರ್ತಿ, ಇನ್ನೋರ್ವ ಸದಸ್ಯರಾದ ಇಂದಿರಾ ಕಿರಣ್, ಕಾಂಗ್ರೆಸ್ ಪಕ್ಷದ ಜಿಲ್ಲಾ ಕಾರ್ಯಧ್ಯಕ್ಷ ಕೆ.ಎಂ. ಹಾಲಸ್ವಾಮಿ, ಕಿರಣ್ ಯಾದವ್ ಪಾಲ್ಗೊಂಡಿದ್ದರು.

### ಬಾಲ್ಯ, ಕಿಶೋರಾವಸ್ಥೆ ಕಾರ್ಮಿಕರ ತಪಾಸಣೆ: ಕರಪತ್ರ ನೀಡಿ ಜಾಗೃತಿ

**ಚಿತ್ರದುರ್ಗ:** ಹಿರಿಯೂರು ನಗರದಲ್ಲಿ ಬಾಲ್ಯ ಹಾಗೂ ಕಿಶೋರಾವಸ್ಥೆ ಕಾರ್ಮಿಕರ ತಪಾಸಣೆಯನ್ನು ವಿವಿಧ ಅಂಗಡಿ, ಹೋಟೆಲ್, ಗ್ಯಾರೇಜ್ ಹಾಗೂ ವಿವಿಧ ವಾಣಿಜ್ಯ ಸಂಸ್ಥೆಗಳಿಗೆ ಸೋಮವಾರ ಅಧಿಕಾರಿಗಳು ಭೇಟಿ ಮಾಲೀಕರಿಗೆ ಕರಪತ್ರ ನೀಡಿ ಜಾಗೃತಿ ಮೂಡಿಸಲಾಯಿತು. ತಪಾಸಣೆಯಲ್ಲಿ ಕಾರ್ಮಿಕ ನಿರೀಕ್ಷಕ ಅಲ್ಲಭಕ್ಷ್, ಶಿಶು ಅಭಿವೃದ್ಧಿ ಯೋಜನಾಧಿಕಾರಿ ರಾಘವೇಂದ್ರ, ಬಾಲಕಾರ್ಮಿಕ ಯೋಜನಾ ನಿರ್ದೇಶಕ ಪಿ.ಸತೀಶ್ ಕುಮಾರ್ ಹಾಗೂ ಪೊಲೀಸ್ ಸಿಬ್ಬಂದಿ ನಫಿ ತಂಡದಲ್ಲಿ ಇದ್ದರು.



**ಪ್ರಮುಖ ಸುದ್ದಿ**

# ಮತದಾರರ ಪಟ್ಟಿ ಅರ್ಜಿಗಳ ತ್ವರಿತ ವಿಲೇವಾರಿಗೆ ಸೂಚನೆ



» ಮೊದಲ ಪುಟದಿಂದ

ರಾಜಕೀಯ ಪಕ್ಷದವರು ಸಹಕರಿಸಿ: ಚುನಾವಣಾ ಆಯೋಗದ ಸೂಚನೆಯಂತೆ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯ ಜರುಗಿದ್ದು, ಡಿ.9 ರವರೆಗೂ ಹಕ್ಕು ಮತ್ತು ಆಕ್ಷೇಪಣೆ ಸಲ್ಲಿಸಲು ಅವಕಾಶವಿದೆ. ಈ ಅವಧಿಯೊಳಗೆ ಹೆಸರು ಸೇರ್ಪಡೆ, ತಿದ್ದುಪಡಿ, ಸ್ಥಳಾಂತರ ಮತ್ತಿತರ ಪ್ರಕ್ರಿಯೆ ಮಾಡಿಕೊಳ್ಳಬಹುದಾಗಿದ್ದು, ಅವಧಿ ಮುಗಿದ ಬಳಿಕ ಅವಕಾಶ ಇರುವುದಿಲ್ಲ ಎಂದರು. ಡಿ. 2 ಮತ್ತು 3 ರಂದು ಜಿಲ್ಲೆಯಲ್ಲಿ ಮತದಾರರ ನೊಂದಣಿಗೆ ವಿಶೇಷ ಅಭಿಯಾನವನ್ನು ಹಮ್ಮಿಕೊಂಡು, ಅಧಿಕಾರಿಗಳು ಮತಗಟ್ಟೆಗಳಿಗೆ ಭೇಟಿ ನೀಡುವರು. ರಾಜಕೀಯ ಪಕ್ಷದವರು ಪ್ರತಿ ಬೂತ್ ಮಟ್ಟಕ್ಕೆ ಏಜೆಂಟರನ್ನು ನೇಮಿಸಿಕೊಂಡು, ಪಟ್ಟಿಯನ್ನು ಆಯಾ ತಹಸಿಲ್ದಾರರಿಗೆ ಸಲ್ಲಿಸಬೇಕು, ಅಂತಹ ಏಜೆಂಟರಿಗೆ ನಮೂನೆ–06, 07 ಮತ್ತು 08 ಅರ್ಜಿಗಳ ಬಳಕೆ ಬಗ್ಗೆ ಸೂಕ್ತ ಮಾಹಿತಿ ಹಾಗೂ ತರಬೇತಿ ನೀಡಬೇಕು. ಯುವ ಮತದಾರರನ್ನು ಮತದಾರರ ಪಟ್ಟಿಗೆ ಸೇರಿಸಲು ಆಸಕ್ತಿ ವಹಿಸಬೇಕು. ಚುನಾವಣಾ ಆಯೋಗ ನೀಡುವ ಮಾರ್ಗಸೂಚಿಗಳನ್ನು ಪಾಲಿಸುವ ಮೂಲಕ ರಾಜಕೀಯ ಪಕ್ಷದವರು ಸಹಕಾರ ನೀಡಬೇಕು ಎಂದು ತಿಳಿಸಿದರು.

ಜಿ.ಪಂ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸೋಮಶೇಖರ್ ಅವರು ಮಾತನಾಡಿ, ಯುವ ಮತದಾರರನ್ನು ಮತದಾರರ ಪಟ್ಟಿಗೆ ಹೆಚ್ಚು ಹೆಚ್ಚು ಸೇರ್ಪಡೆಗೊಳಿಸಲು, ಜಿಲ್ಲೆಯ ಎಲ್ಲ ಪದವಿ, ಡಿಪ್ಲೋಮಾ, ಪಾಲಿಟೆಕ್ನಿಕ್, ಇಂಜಿನಿಯರಿಂಗ್ ಸೇರಿದಂತೆ ವಿವಿಧ ಕಾಲೇಜುಗಳಲ್ಲಿ ವಿಶೇಷ ಅಭಿಯಾನವನ್ನು ಆರಂಭಿಸಲಾಗಿದೆ, ಯುವಜನರಿಗೆ ಮತದಾರರ ಪಟ್ಟಿಗೆ ಹೆಸರು ಸೇರ್ಪಡೆಗೊಳಿಸಲು ಜಾಗೃತಿ ಮೂಡಿಸಲಾಗುತ್ತಿದೆ ಎಂದರು.

ಸಭೆಯಲ್ಲಿ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ., ಜಿ.ಪಂ. ಸಿಇಒ ಸೋಮಶೇಖರ್, ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ಎಂ. ಕಾರ್ತಿಕ್, ಸೇರಿದಂತೆ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು, ತಹಸಿಲ್ದಾರರು, ಅಲ್ಲದೆ ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಭಾಗವಹಿಸಿದ್ದರು.

## 14,01,830 ಮತದಾರರು

ಪ್ರಕಟಿತ ಕರಡು ಮತದಾರರ ಪಟ್ಟಿಯನ್ವಯ ಜಿಲ್ಲೆಯಲ್ಲಿ 6,98,024–ಪುರುಷ, 7,03,728–ಮಹಿಳೆ, 78– ಇತರೆ ಸೇರಿದಂತೆ ಒಟ್ಟು 14,01,830 ಮತದಾರರಿದ್ದಾರೆ. ನಗರ–299, ಗ್ರಾಮೀಣ–1362 ಸೇರಿದಂತೆ ಒಟ್ಟು 1661 ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ. ತಿಳಿಸಿದರು.1510 ಜನ ಶಿಕ್ಷಕರು, 151 ಜನ ಆಶಾ ಮತ್ತು ಅಂಗನವಾಡಿ ಕಾರ್ಯಕರ್ತರನ್ನು ಬೂತ್ ಮಟ್ಟದ ಅಧಿಕಾರಿಗಳನ್ನಾಗಿ ನೇಮಿಸಲಾಗಿದೆ. ಈ ಹಿಂದೆ ಒಬ್ಬರು ಬಿಎಲ್‌ಒ 2–3 ಮತಗಟ್ಟೆ ನೋಡಿಕೊಳ್ಳುವ ಪರಿಸ್ಥಿತಿ ಇತ್ತು. ಆದರೆ ಈಗ ಪ್ರತಿ ಮತಗಟ್ಟೆಗೆ ಒಬ್ಬರಂತೆ ಬಿಎಲ್‌ಒ ನೇಮಿಸಲಾಗಿದೆ. ಕಳೆದ ಜೂನ್ 05 ರಿಂದ ನ. 18 ರವರೆಗೆ ನಮೂನೆ 06, 07, 08 ಮತ್ತಿತರೆ ಒಟ್ಟು 79582 ಅರ್ಜಿಗಳು ಸಲ್ಲಿಕೆಯಾಗಿದ್ದು, 59815 ಅರ್ಜಿಗಳನ್ನು ವಿಲೇವಾರಿ ಮಾಡಲಾಗಿದೆ ಎಂದರು.ಪ್ರಸಕ್ತ ಪರಿಷ್ಕರಣೆ ಕಾರ್ಯಕ್ರಮದಲ್ಲಿ 5692 ಅರ್ಜಿಗಳು ಸಲ್ಲಿಕೆಯಾಗಿವೆ. ಕೇವಲ 18 ವರ್ಷ ತುಂಬಿದವರು ಮಾತ್ರವಲ್ಲದೆ, 17 ವರ್ಷ ಪೂರ್ಣಗೊಂಡವರಿಂದಲೂ ನಮೂನೆ–06 ಪಡೆದುಕೊಳ್ಳಲು ಬಿಎಲ್‌ಒ ಗಳಿಗೆ, ತಹಸಿಲ್ದಾರರಿಗೆ ಸೂಚನೆ ನೀಡಲಾಗಿದೆ. ಒಂದಕ್ಕಿಂತ ಹೆಚ್ಚು ಕಡೆ ಮತದಾರರ ಪಟ್ಟಿಯಲ್ಲಿ ಹೆಸರು ಇರುವವರನ್ನು ಪತ್ತೆ ಹಚ್ಚಿ, ಅಂತಹವರಿಗೆ ಪತ್ರ ಬರೆದು, ವಿವರಣೆ ಕೇಳಲಾಗುತ್ತಿದೆ, ಅಲ್ಲದೆ ಅಂತಹವರು ಯಾವುದಾದರೂ ಒಂದು ಮತಗಟ್ಟೆಯಲ್ಲಿ ಉಳಿಯುವಂತೆ ಆಯ್ಕೆ ಮಾಡಿಕೊಳ್ಳಲು ಅವಕಾಶ ನೀಡಲಾಗುವುದು, ಅವರ ಮನವಿಯನ್ನು ಬಿಎಲ್‌ಒ ಗಳ ಪರಿಶೀಲನೆ ಬಳಿಕ ಅನುಮೋದಿಸಲಾಗುವುದು ಎಂದರು.

## ಫಾಸ್ಟ್ ನ್ಯೂಸ್

### ಬಸವೇಶ್ವರ ಆಂಗ್ಲಮಾಧ್ಯಮ ಶಾಲೆಯಲ್ಲಿ ಮಕ್ಕಳ ದಿನಾಚರಣೆ



■ ಚಳ್ಳಕೆರೆ

ಈ ರಾಷ್ಟ್ರದ ಹೆಮ್ಮೆಯ ಮಾಜಿ ಪ್ರಧಾನಮಂತ್ರಿ ಜವಹರಲಾಲ್ ನೆಹರೂರವರ ಜನ್ಮದಿನಾಚರಣೆಯನ್ನು ಮಕ್ಕಳ ದಿನಾಚರಣೆ ಕಾರ್ಯಕ್ರಮವಾಗಿ ಆಚರಣೆ ಮಾಡಲಾಗುತ್ತಿದೆ. ಮಕ್ಕಳಿಗೆ ಹೆಚ್ಚು ಶಕ್ತಿ ತುಂಬಲು ಹಾಗೂ ಅವರ ಜ್ಞಾನಾರ್ಜನೆಗೆ ಒತ್ತು ನೀಡಲು ಈ ದಿನದಂದು ನಾವೆಲ್ಲರೂ ಸಂಕಲ್ಪ ಮಾಡಬೇಕೆಂದು ಬಸವೇಶ್ವರ ಆಂಗ್ಲಮಾಧ್ಯಮ ಶಾಲೆಯ ಅಧ್ಯಕ್ಷ ವಿ.ಮಂಜುನಾಥ ತಿಳಿಸಿದರು. ಶಾಲೆಯಲ್ಲಿ ಹಮ್ಮಿಕೊಂಡಿದ್ದ ಮಕ್ಕಳ ದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು. ಇದೇ ಸಂದರ್ಭದಲ್ಲಿ ವಾಣಿಜ್ಯೋದ್ಯಮಿ ದಿವಂಗರ ಎ.ಸಿ.ಮಲ್ಲಿಕಾರ್ಜುನಪ್ಪನವರ ಜ್ಞಾಪಕಾರ್ಥವಾಗಿ ಶಾಲೆಯ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಹಮ್ಮಿಕೊಂಡಿದ್ದು ನಗರಸಭೆ ಸದಸ್ಯ ಸಾವಿತ್ರಮ್ಮ ಅವರ ಕುಟುಂಬದ ಸದಸ್ಯರಾದ ಸ್ವರೂಪ್, ಶೈಲಜಾ ಮುಂತಾದವರು ಸನ್ಮಾನಿಸಿದರು. ಕಾರ್ಯಕ್ರಮದಲ್ಲಿ ಸಂಸ್ಥೆಯ ಕಾರ್ಯದರ್ಶಿ ಕೋಟೆ ಜಯಣ್ಣ, ಶಂಕರಲಿಂಗಯ್ಯ, ಬಸವರಾಜು, ಮುಖ್ಯ ಶಿಕ್ಷಕಿ ಮಧುರ, ಶಿಕ್ಷಕರಾದ ತಿಪ್ಪೇಸ್ವಾಮಿ, ಉಮಾ ಮುಂತಾದವರು ಭಾಗವಹಿಸಿದ್ದರು.

### ಜಿಲ್ಲಾ ಪೊಲೀಸ್ ವಾರ್ಷಿಕ ಕ್ರೀಡಾಕೂಟ; ಉತ್ತಮ ಆರೋಗ್ಯಕ್ಕೆ ಕ್ರೀಡೆ ಅಗತ್ಯ: ಎಸ್.ಪಿ ಉಮಾ ಪ್ರಶಾಂತ್



» ದಾವಣಗೆರೆ

ಸಾರ್ವಜನಿಕ ಶಾಂತಿ ಮತ್ತು ಕಾನೂನು ಸುವ್ಯವಸ್ಥೆ ಕಾಪಾಡುತ್ತ ಸದಾ ಒತ್ತಡದ ಬದುಕು ನಡೆಸುವ ಪೊಲೀಸರಿಗೆ ವಾರ್ಷಿಕ ಕ್ರೀಡಾಕೂಟ ಸಹಕಾರಿಯಾಗಲಿದೆ ಎಂದು ಜಿಲ್ಲಾ ಪೊಲೀಸ್ ಅಧೀಕ್ಷಕರಾದ ಉಮಾ ಪ್ರಶಾಂತ್ ತಿಳಿಸಿದರು

ಸೋಮವಾರ ನಗರದ ಜಿಲ್ಲಾ ಪೊಲೀಸ್ ಕವಾಯತು ಮೈದಾನದಲ್ಲಿ ನಡೆದ ಜಿಲ್ಲಾ ಪೊಲೀಸ್ ವಾರ್ಷಿಕ ಕ್ರೀಡಾಕೂಟವನ್ನು ಪಾರಿವಾಳ ಹಾರಿ ಬಿಡುವ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು.ಪ್ರಸಕ್ತ ಸಾಲಿನ ಜಿಲ್ಲಾ ಪೊಲೀಸ್ ಕ್ರೀಡಾಕೂಟವನ್ನು ನವೆಂಬರ್ 22 ರವರೆಗೆ ಮೂರು ದಿನಗಳ ಕಾಲ ಆಯೋಜಿಸಲಾಗಿದ್ದು, ಸಾರ್ವಜನಿಕ ಶಾಂತಿ ಮತ್ತು ಕಾನೂನು ಸುವ್ಯವಸ್ಥೆ ಕಾಪಾಡುವಲ್ಲಿ ಪೊಲೀಸರು ತಮ್ಮ ಮನಸ್ಸಿನ ಶಾಂತತೆ, ಆರೋಗ್ಯಪೂರ್ಣ ಜೀವನವನ್ನು ನಡೆಸಬೇಕಾದರೆ ಕ್ರೀಡೆ ಅಗತ್ಯವಾಗಿದೆ. ಕ್ರೀಡೆಗಳ ಸದೃಢವಾದ ದೇಹ ಮತ್ತು ಮನಸ್ಸನ್ನು ಹೊಂದುವ ಮೂಲಕ ಜೀವನವನ್ನು ಅತ್ಯುತ್ತಮಪಡಿಸಿಕೊಳ್ಳಬೇಕಾಗಿದೆ ಎಂದರು. ಎಲ್ಲಾ ಪೊಲೀಸರು ಬಿಡುವಿಲ್ಲದೆ 24*7 ಒತ್ತಡದ ವಾತಾವರಣದಲ್ಲಿಯೇ ಕಾರ್ಯ ನಿರ್ವಹಿಸುತ್ತಿದ್ದು, ಹಾಗಾಗಿ ತಮ್ಮ ಆರೋಗ್ಯದ ಬದುಕನ್ನು ಸಾಗಿಸಲು ಕ್ರೀಡೆ ಸಹಕಾರಿಯಾಗಿದೆ. ಮನುಷ್ಯ ಸದೃಢ ಹಾಗೂ ಆರೋಗ್ಯಕರವಾಗಿದ್ದಾಗ ಮಾತ್ರ ಉತ್ತಮ ಕೆಲಸ ನಿರ್ವಹಿಸಲು ಸಾಧ್ಯ, ಈ ವಾರ್ಷಿಕ ಕ್ರೀಡೆಯನ್ನು ಮೂರು ದಿನಗಳಿಗೆ ಸೀಮಿತಗೊಳಿಸದೆ, ತಮ್ಮ ದಿನಿತ್ಯದ ಚಟುವಟಿಕೆಯಾಗಿ ಕ್ರೀಡೆಯನ್ನು ಆಯ್ಕೆ ಮಾಡಿಕೊಳ್ಳಬೇಕು. ಕ್ರೀಡೆಯಲ್ಲಿ ಸೋಲು-ಗೆಲುವು ಮುಖ್ಯವಲ್ಲ, ಬದಲಾಗಿ ಭಾಗವಹಿಸುವುದು ಬಹು ಮುಖ್ಯವಾಗಿರುತ್ತದೆ ಎಂದು ಅವರು ತಿಳಸಿದರು.

ಪಥ ಸಂಚಲನ : ಜಿಲ್ಲಾ ಪೊಲೀಸ್ ಕ್ರೀಡಾಕೂಟ ನಿಮಿತ್ತ ಡಿ.ಎ.ಆರ್ ತಂಡ, ನಗರ ಉಪ ವಿಭಾಗ, ದಾವಣಗೆರೆ ಗ್ರಾಮಾಂತರ, ಚನ್ನಗಿರಿ ಉಪ ವಿಭಾಗ ಹಾಗೂ ಮಹಿಳಾ ಪೊಲೀಸ್ ತಂಡಗಳು ಪಥ ಸಂಚನದಲ್ಲಿ ಭಾಗವಹಿಸಿದ್ದವು.ಹೆಚ್ಚುವರಿ ಜಿಲ್ಲಾ ಪೊಲೀಸ್ ಅಧೀಕ್ಷಕರಾದ ವಿಜಯಕುಮಾರ ಎಂ ಸಂತೋಷ, ರಾಷ್ಟ್ರೀಯ ಖೋ-ಖೋ ಕ್ರೀಡಾಪಟು ಅರ್ಜುನ್ ಹಾಗೂ ಡಿ.ವೈ.ಎಸ್.ಪಿ ಪ್ರಕಾಶ್ ಪಿ.ಬಿ ಉಪಸ್ಥಿತರಿದ್ದರು.

### ಅವಧಿ ವಿಸ್ತರಣೆ

» ದಾವಣಗೆರೆ

ಪ್ರಸಕ್ತ ಸಾಲಿನ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ವತಿಯಿಂದ ಅನುಷ್ಠಾನಗೊಳ್ಳುತ್ತಿರುವ ವಿವಿಧ ಯೋಜನೆಗಳಿಗೆ ಅರ್ಜಿ ಸಲ್ಲಿಸಲು ಡಿಸೆಂಬರ್ 15 ರ ವರೆಗೆ ಅವಧಿ ವಿಸ್ತರಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಕಛೇರಿ ದೂ.08192-263936, ವಿಕಲಚೇತನರ ಸಹಾಯವಾಣಿ 08192-263939ಗೆ ಸಂಪರ್ಕಿಸಬಹುದೆಂದು.

### ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯಕ್ರಮದ ಯಶಸ್ವಿಗೆ ಬಿಎಲ್‌ಒ ಗಳಿಗೆ ಕರೆ

# ಮತಗಟ್ಟೆಗಳಿಗೆ ಮತಪಟ್ಟಿ ವೀಕ್ಷಕರಾದ ಡಾ. ಶಮ್ಲಾ

» ಚಿತ್ರದುರ್ಗ/ ಚಳ್ಳಕೆರೆ

ಜಿಲ್ಲೆಯಲ್ಲಿ ನಡೆಯುತ್ತಿರುವ ಮತದಾರರ ಪಟ್ಟಿ ಸಂಕ್ಷಿಪ್ತ ಪರಿಷ್ಕರಣೆ ಕಾರ್ಯಕ್ರಮವನ್ನು ಅತ್ಯಂತ ಅಚ್ಚುಕಟ್ಟಾಗಿ ನಡೆಸಿ, ಅರ್ಹರಿರುವವರನ್ನು ಮತದಾರರ ಪಟ್ಟಿಗೆ ಹೆಸರು ಸೇರ್ಪಡೆಗೊಳಿಸುವ ಮೂಲಕ ಯಶಸ್ವಿಗೊಳಿಸಬೇಕು ಎಂದು ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆ ಕಾರ್ಯದರ್ಶಿ ಹಾಗೂ ಚಿತ್ರದುರ್ಗ ಜಿಲ್ಲೆಗೆ ಮತದಾರರ ಪಟ್ಟಿ ವೀಕ್ಷಕರಾಗಿರುವ ಡಾ. ಶಮ್ಲಾ ಇಕ್ಬಾಲ್ ಅವರು ಬೂತ್ ಮಟ್ಟದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಮತದಾರರ ಪಟ್ಟಿಯ ವಿಶೇಷ ಸಂಕ್ಷಿಪ್ತ ಪರಿಷ್ಕರಣೆ ಕಾರ್ಯಕ್ರಮ ಅಂಗವಾಗಿ ಸೋಮವಾರದಂದು ಜಿಲ್ಲೆಯ ವಿವಿಧೆಡೆ ಮತಗಟ್ಟೆಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಅವರು, ಚಿತ್ರದುರ್ಗ ತಾಲ್ಲೂಕು ಸೀಬಾರ, ಚಳ್ಳಕೆರೆ ತಾಲ್ಲೂಕು ಎನ್. ಮಹದೇವಪುರ, ಚಳ್ಳಕೆರೆ ನಗರದ ಗಾಂಧಿನಗರದಲ್ಲಿನ ಮತಗಟ್ಟೆಗಳಿಗೆ ಭೇಟಿ ನೀಡಿದರು.

ಮತಗಟ್ಟೆಯಲ್ಲಿ ಬಿಎಲ್‌ಒಗಳು ಕಾರ್ಯ ನಿರ್ವಹಿಸುತ್ತಿರುವ ಬಗ್ಗೆ ಪರಿಶೀಲನೆ ನಡೆಸಿದ ಅವರು, ಪರಿಷ್ಕರಣೆ ಕಾರ್ಯದ ಬಗ್ಗೆ ಮಾಹಿತಿ ಪಡೆದುಕೊಂಡರು. ಗ್ರಾಮಗಳಲ್ಲಿ ಮದುವೆಯಾಗಿ ಬೇರೆಡೆ ಹೋಗಿರುವ ಹೆಣ್ಣು ಮಕ್ಕಳು, ತಾವು ಹೋಗಿರುವ ಊರುಗಳಲ್ಲಿ ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆ ಮಾಡಿಸಿದ್ದಲ್ಲಿ, ಅಂತಹವುಗಳನ್ನು ಪರಿಶೀಲಿಸಬೇಕು, ಅಲ್ಲದೆ ಮರಣ ಹೊಂದಿರುವ ಮತದಾರರಿದ್ದಲ್ಲಿ, ಅಂತಹವರ ಮರಣ ಪ್ರಮಾಣ ಪತ್ರವನ್ನು ಪರಿಶೀಲಿಸಿದ ಬಳಿಕವೇ ಹೆಸರು ತೆಗೆಯಲು ಅಗತ್ಯ ಪ್ರಕ್ರಿಯೆ ಕೈಗೊಳ್ಳಬೇಕು.





ಮತದಾರರ ಪಟ್ಟಿಗೆ ಹೆಸರು ಸೇರ್ಪಡೆಗೊಳಿಸಲು 18 ವರ್ಷ ಮಾತ್ರವಲ್ಲದೆ, 17 ವರ್ಷ ಪೂರ್ಣಗೊಂಡವರನ್ನೂ ಕೂಡ ಮತದಾರರ ಪಟ್ಟಿಗೆ ಸೇರ್ಪಡೆಗೊಳಿಸಲು ನಮೂನೆ-06 ಪಡೆದುಕೊಳ್ಳಬೇಕು. ಪರಿಷ್ಕರಣೆ ಕಾರ್ಯದಲ್ಲಿ ನಿರ್ಲಕ್ಷ್ಯ ತೋರುವಂತಿಲ್ಲ. ಡಿ. 09 ರವರೆಗೆ ಜರುಗುವ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ನಿರ್ವಹಿಸಿ, ಯಶಸ್ವಿಗೊಳಿಸಬೇಕು ಎಂದು ಡಾ. ಶಮ್ಲಾ ಇಕ್ಬಾಲ್ ಅವರು ಸೂಚನೆ ನೀಡಿದರು.

ಸಾರ್ವಜನಿಕರೊಂದಿಗೆ ಮಾತನಾಡಿದ ಡಾ. ಶಮ್ಲಾ ಇಕ್ಬಾಲ್ ಅವರು ಅರ್ಹರನ್ನು ಮತದಾರರ ಪಟ್ಟಿಗೆ ಹೆಸರು ಸೇರ್ಪಡೆಗೊಳಿಸಲು ಸಹಕಾರ ನೀಡಬೇಕು, ಅಲ್ಲದೆ ಬೇರೆಡೆ ವಲಸೆ ಹೋಗಿರುವವರನ್ನು ಸಂಪರ್ಕಿಸಿ, ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯಕ್ರಮದ ಮಾಹಿತಿ ನೀಡಿ, ಅವರಲ್ಲಿ ಯಾರಾದರೂ ಅರ್ಹರಿದ್ದಲ್ಲಿ, ಅಂತಹವರನ್ನು ಮತದಾರರ ಪಟ್ಟಿಗೆ ಸೇರಿಸಲು ಯತ್ನಿಸಬೇಕು ಎಂದು ಮನವಿ ಮಾಡಿದರು.

ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ., ಉಪವಿಭಾಗಾಧಿಕಾರಿ ಎಂ. ಕಾರ್ತಿಕ್, ತಹಸಿಲ್ದಾರ್‌ಗಳು, ಸಂಬಂಧಪಟ್ಟ ಮತಗಟ್ಟೆಗಳ ಬಿಎಲ್‌ಒ ಗಳು ಈ ಸಂದರ್ಭದಲ್ಲಿ ಇದ್ದರು.

## ಉಪವಿಭಾಗಾಧಿಕಾರಿಯಿಂದ ಮತದಾರರ ಜಾಗೃತಿ

» ಚಿತ್ರದುರ್ಗ

ಜಿಲ್ಲೆಯಲ್ಲಿ ಮತದಾರರ ಪಟ್ಟಿ ವಿಶೇಷ ಸಂಕ್ಷಿಪ್ತ ಪರಿಷ್ಕರಣೆ ಕಾರ್ಯಕ್ರಮ ಜರುಗುತ್ತಿದ್ದು, ಉಪವಿಭಾಗಾಧಿಕಾರಿ ಕಾರ್ತಿಕ್ ಅವರು ಹಿರಿಯೂರು ತಾಲ್ಲೂಕು ಉಡುವಳ್ಳಿಯಲ್ಲಿನ ನವೋದಯ ವಿದ್ಯಾಲಯಕ್ಕೆ ಭೇಟಿ ನೀಡಿ, ಕಾಲೇಜು ವಿದ್ಯಾರ್ಥಿಗಳಿಗೆ ಮತ ಪಟ್ಟಿಗೆ ಹೆಸರು ಸೇರ್ಪಡೆ ಕುರಿತಂತೆ ಜಾಗೃತಿ ಮೂಡಿಸಿದರು.

ನವೋದಯ ವಿದ್ಯಾಲಯದಲ್ಲಿನ ಕಾಲೇಜು ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದ ಅವರು, ಈ ಮೊದಲು 18 ವರ್ಷ ಪೂರ್ಣಗೊಂಡು ಮತದಾರರ ಪಟ್ಟಿಗೆ ಹೆಸರು ಸೇರಿಸಲು ವರ್ಷಕ್ಕೆ ಒಂದು ದಿನವನ್ನು ಮಾತ್ರ ಅರ್ಹತಾ ದಿನಾಂಕವನ್ನಾಗಿ ನಿಗದಿಪಡಿಸಲಾಗುತ್ತಿತ್ತು.

ಆದರೆ ಇದೀಗ ಚುನಾವಣಾ ಆಯೋಗವು ಜನವರಿ, ಏಪ್ರಿಲ್, ಜುಲೈ ಹಾಗೂ ಅಕ್ಟೋಬರ್ 01 ರ ದಿನ ಸೇರಿದಂತೆ ವರ್ಷಕ್ಕೆ 04 ದಿನಾಂಕಗಳನ್ನು ಅರ್ಹತಾ ದಿನವನ್ನಾಗಿ ನಿಗದಿಪಡಿಸಿದೆ. ಹೀಗಾಗಿ 17 ವರ್ಷ ಪೂರ್ಣಗೊಂಡವರು ಕೂಡ ಮತದಾರರ ಪಟ್ಟಿಗೆ ಹೆಸರು ಸೇರ್ಪಡೆಗೊಳಿಸಲು ನಮೂನೆ 06 ಭರ್ತಿ ಮಾಡಿ ಸಲ್ಲಿಸಬಹುದು. ಈ ರೀತಿ ಅರ್ಜಿ ಸಲ್ಲಿಸಿದವರು 18 ವರ್ಷ ಪೂರ್ಣಗೊಂಡ ಕೂಡಲೆ, ಅವರ ಹೆಸರನ್ನು ಮತದಾರರ ಪಟ್ಟಿಗೆ ಸೇರ್ಪಡೆಗೊಳಿಸಲು ನಾವೇ ಕ್ರಮ ಕೈಗೊಳ್ಳುತ್ತೇವೆ.



ಈ ಬಾರಿ ಆಯಾ ಕಾಲೇಜು ಮಟ್ಟದಲ್ಲಿಯೇ ವಿದ್ಯಾರ್ಥಿಗಳಿಂದ ಅರ್ಜಿಗಳನ್ನು ಸಂಗ್ರಹಿಸಲು ವ್ಯವಸ್ಥೆ ಮಾಡಲಾಗಿದ್ದು, ಆಯಾ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳನ್ನು ನೋಡಲ್ ಅಧಿಕಾರಿಯನ್ನಾಗಿ ನೇಮಿಸಲಾಗಿದೆ.

ಜಿಲ್ಲೆಯ ಎಲ್ಲ ಕಾಲೇಜು ವಿದ್ಯಾರ್ಥಿಗಳು, ಮತದಾರರ ಪಟ್ಟಿಗೆ ಹೆಸರು ಸೇರ್ಪಡೆಗೊಳಿಸಲು ಅರ್ಹರಿರುವರು, ಕೂಡಲೆ ತಮ್ಮ ಕಾಲೇಜಿನ ಮುಖ್ಯಸ್ಥರನ್ನು ಸಂಪರ್ಕಿಸಿ, ಪಟ್ಟಿಗೆ ಹೆಸರು ಸೇರ್ಪಡೆಗೊಳಿಸಬಹುದಾಗಿದೆ. ಈ ಅವಕಾಶದ ಸದುಪಯೋಗವನ್ನು ಎಲ್ಲರೂ ಪಡೆದುಕೊಳ್ಳಬೇಕು ಎಂದು ಉಪವಿಭಾಗಾಧಿಕಾರಿ ಮನವಿ ಮಾಡಿದರು.

ಈ ಸಂದರ್ಭದಲ್ಲಿ ನವೋದಯ ವಿದ್ಯಾಲಯದ ನೂರಾರು ವಿದ್ಯಾರ್ಥಿಗಳು ನಮೂನೆ -06 ಭರ್ತಿ ಮಾಡಿ, ಮತದಾರರ ಪಟ್ಟಿಗೆ ಹೆಸರು ಸೇರ್ಪಡೆಗೆ ಅರ್ಜಿ ಸಲ್ಲಿಸಿದರು, ನವೋದಯ ವಿದ್ಯಾಲಯದ ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಕಾಡುಗೊಲ್ಲ ಸಮುದಾಯಕ್ಕೆ ಜಾತಿಪ್ರಮಾಣ ಪತ್ರ ನೀಡುವಲ್ಲಿ ಸರ್ಕಾರ ನಿರ್ಲಕ್ಷ್ಯ ಖಂಡನೀಯ



» ಚಳ್ಳಕೆರೆ

ಚಳ್ಳಕೆರೆ ತಾಲ್ಲೂಕು ಸೇರಿದಂತೆ ರಾಜ್ಯದ ಕಾಡುಗೊಲ್ಲ ಸಮುದಾಯಕ್ಕೆ ಮೀಸಲಾತಿ ಮತ್ತು ಕಾಡುಗೊಲ್ಲ ಜಾತಿಪ್ರಮಾಣ ಪತ್ರ ನೀಡಬೇಕೆಂದು ಒತ್ತಾಯಿಸಿ ತಾಲ್ಲೂಕು ಕಾಡುಗೊಲ್ಲರ ಸಂಘದ ಅಧ್ಯಕ್ಷ ಬೂದಿಹಳ್ಳಿ ರಾಜಣ್ಣ ನೇತೃತ್ವದಲ್ಲಿ ತಾಲ್ಲೂಕು ಕಚೇರಿ ಮುಂಭಾಗದಲ್ಲಿ ಸಮುದಾಯದ ಮುಖಂಡರು ಪ್ರತಿಭಟನೆ ನಡೆಸಿದರು.

ಪ್ರತಿಭಟನೆಯನ್ನು ಉದ್ದೇಶಿಸಿ ಮಾತನಾಡಿದ ತಾಲ್ಲೂಕು ಗೊಲ್ಲ ಸಂಘದ ಅಧ್ಯಕ್ಷ ಹಾಗೂ ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷ ಟಿ.ರವಿಕುಮಾರ್, ಪ್ರಸ್ತುತ ಕಾಂಗ್ರೆಸ್ ಸರ್ಕಾರದ ಆಡಳಿತದಲ್ಲಿ ಗೊಲ್ಲ ಹಾಗೂ ಕಾಡುಗೊಲ್ಲ ಸಮುದಾಯಕ್ಕೆ ಅನೇಕ ಸೌಲಭ್ಯ ನೀಡಲಾಗುತ್ತಿದೆಯಾದರೂ ಮೂಲಭೂತವಾಗಿ ಕಾಡುಗೊಲ್ಲ ಸಮುದಾಯದ ಅಭಿವೃದ್ಧಿಗೆ ಮೊದಲ ಆದ್ಯತೆ ನೀಡಬೇಕಿದೆ. ಪ್ರಸ್ತುತ ಇಂದಿನ ಎಲ್ಲಾ ಬೆಳವಣಿಗೆಗಳ ಹಿಂದೆ ಕಾಡುಗೊಲ್ಲ ಸಮುದಾಯದ ಕೊಡುಗೆ ಅಪಾರವಾಗಿದೆ. ಸರ್ಕಾರ ಈ ಸಮುದಾಯಕ್ಕೆ ಜಾತಿ ಪ್ರಮಾಣ ಪತ್ರ ನೀಡುವಲ್ಲಿ ಅನಗತ್ಯ ವಿಳಂಬ ತೋರುತ್ತಿರುವುದು ವಿಷಾದ ಸಂಗತಿ. ಈ ಬಗ್ಗೆ ಸರ್ಕಾರ ಸೂಕ್ತ ನಿರ್ಧಾರ ಕೈಗೊಳ್ಳದೇ ಇದ್ದಲ್ಲಿ ಮುಂದಿನ ದಿನಗಳಲ್ಲಿ ಹೋರಾಟದ ರೂಪುರೇಷೆಗಳನ್ನು ಬದಲಾಯಿಸಿ ಸರ್ಕಾರವನ್ನು ಎಚ್ಚರಿಸಲಾಗುವುದು.

ಅಧ್ಯಕ್ಷ ಬೂದಿಹಳ್ಳಿ ರಾಜಣ್ಣ ಮಾತನಾಡಿ, ಕಾಡುಗೊಲ್ಲ ಸಮುದಾಯದ ತಾಳ್ಮೆಯನ್ನು ಸರ್ಕಾರ ಪರೀಕ್ಷಿಸಬಾರದು. ಈಗಾಗಲೇ ಹಲವಾರು ಬಾರಿ ಮನವಿ ಪತ್ರದ ಮೂಲಕ ಒತ್ತಾಯ ಮಾಡಿದ್ದರೂ ಸೂಕ್ತ ಸ್ಪಂದನವಿಲ್ಲ. ಸರ್ಕಾರದ ನಿರ್ಲಕ್ಷ್ಯವನ್ನು ಖಂಡಿಸಿ ಈಗಷ್ಟೇ ಪ್ರತಿಭಟನೆ ಆರಂಭವಾಗಿದ್ದು ಮುಂದಿನ ದಿನಗಳಲ್ಲಿ ಇದರ ಭೀಕರತೆ ಇನ್ನೂ ಹೆಚ್ಚಾಗಲಿದೆ ಎಂದರು.

ಕಾಡುಗೊಲ್ಲ ಸಮುದಾಯದ ಹಿರಿಯ ಮುಖಂಡ, ಮಾಜಿ ಜಿಲ್ಲಾ ಪಂಚಾಯಿತಿ ಸದಸ್ಯ ರಂಗಸ್ವಾಮಿ, ಶಶಿಧರ, ಹಟ್ಟಿರುದ್ರಪ್ಪ, ನಿಸರ್ಗಗೋವಿಂದರಾಜು, ಮಂಜುನಾಥ, ಎಚ್.ಮಹಲಿಂಗಪ್ಪ, ರಂಗಸ್ವಾಮಿ, ಚಿತ್ರಾವತಿ, ಗೀತಾ, ಹೊನ್ನೂರುಗೋವಿಂದಪ್ಪ ಮುಂತಾದವರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

## ಕನ್ನಡ ಭಾಷೆ ಬೆಳವಣಿಗೆಗೆ ಎಲ್ಲರ ಸಹಕಾರ ಅಗತ್ಯ: ಸುರೇಶ್

» ಚಳ್ಳಕೆರೆ

ವಿಶ್ವದಲ್ಲಿ ಸಾವಿರಾರು ವರ್ಷಗಳ ಇತಿಹಾಸವನ್ನು ಹೊಂದಿರುವ ಅನೇಕ ಶಿಲಾಶಾಸನಗಳಲ್ಲಿ ಕನ್ನಡದ ಸುಂದರಾಕ್ಷರಗಳನ್ನು ಕಾಣುವ ತ್ರಿಪದಿಗಳ ಮೂಲಕ ಬದುಕಿನ ಭಾವೈಕ್ಯತೆ, ಭಾವನಾತ್ಮಕ ಸಂಬಂಧಗಳಿಗೆ ವಿಶೇಷ ಆರ್ಥವನ್ನು ಕಲ್ಪಿಸಿಕೊಂಡು ನಮ್ಮೆಲ್ಲರ ಬದುಕಿಗೆ ಜೀವ ಭಾಷೆಯಾಗಿರುವ ಕನ್ನಡ ಭಾಷೆಯ ಸರ್ವತೋಮುಖ ಅಭಿವೃದ್ಧಿಗೆ ನಾವೆಲ್ಲರೂ ಕೈಜೋಡಿಸಬೇಕೆಂದು ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ತಿಳಿಸಿದರು.

ಅವರು, ನಗರದ ವಿಶ್ವಭಾರತಿ ಪ್ರೌಢಶಾಲಾ ಆವರಣದಲ್ಲಿ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ ನ.25ರಂದು ಆಚರಿಸುವ ಕನ್ನಡ ರಾಜ್ಯೋತ್ಸವ ಹಿನ್ನೆಲೆಯಲ್ಲಿ ಕಾಲೇಜು ಮತ್ತು ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಆಯೋಜಿಸಿದ್ದ ಕನ್ನಡ ನಾಡು, ನುಡಿ, ಸಂಸ್ಕೃತಿ ಕುರಿತ ಪ್ರಬಂಧ, ಭಾಷ ಸ್ಪರ್ಧೆ ಹಾಗೂ ನೃತ್ಯ ಸ್ಪರ್ಧೆ ಕಾರ್ಯಕ್ರಮವನ್ನು ಗಿಡಕ್ಕೆ ನೀರು ಎರೆಯುವ ಮೂಲಕ ಚಾಲನೆ ನೀಡಿ ಬೇರೆ ಭಾಷೆ ಬಳಕೆ ಅನಿವಾರ್ಯವಾದರೆ ಬಳಸಿ, ಕನ್ನಡದ ಕಂಪನ್ನು ನಾಡಿನೆಲ್ಲೆಡೆ ಸುಮುದುರವಾಗಿ ಅರಳಿಸುವ ಕೆಲಸ ವಿದ್ಯಾರ್ಥಿಗಳು, ಯುವಕರಿಂದ ಹೆಚ್ಚಿನ ಪ್ರಮಾಣದಲ್ಲಿ ಆಗಬೇಕು ಎಂದರು.



ಮುಖ್ಯ ಅತಿಥಿಗಳಾಗಿ ಮಾತನಾಡಿದ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಕೆ.ಎಂ.ಶಿವಸ್ವಾಮಿ, ಕನ್ನಡ ಭಾಷೆಯ ಬಗ್ಗೆ ಮಾತನಾಡುವಾಗ, ಬರೆಯುವಾಗ, ಓದುವಾಗ, ವಿಷಯವನ್ನು ಅರಿಯುವಾಗ ನಮಗೆ ಆಗುವ ಆನಂದ ಬೇರೆ ಭಾಷೆಯಿಂದ ಎಂದಿಗೂ ಸಿಗದು. ಕನ್ನಡ ಭಾಷೆಯ ಉಳಿವಿಗೆ, ಬೆಳವಣಿಗೆಗೆ ನಮ್ಮ ಮಹಾನ್ ಕವಿಗಳು, ವಿಮರ್ಶಕರು, ಲೇಖಕರು, ಸಾಹಿತಿಗಳು, ಬರಹಗಾರರು ಮುಂತಾದವರ ಕಾರ್ಯಚಟುವಟಿಕೆ ನಮ್ಮೆಲ್ಲರಿಗೂ ಸದಾಆದರ್ಶವೆಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಜೆ.ಟಿ.ವೀರಭದ್ರಸ್ವಾಮಿ, ತಾಲ್ಲೂಕು ಸಾಹಿತ್ಯ ಪರಿಷತ್ ಚಟುವಟಿಕೆ ನಿಂತ ನೀರಾಗದೆ ಹರಿಯುವ ಪುಣ್ಯ ನದಿಯಾಗಲಿದೆ. ಈ ಭಾರಿಯ ಕನ್ನಡ ರಾಜ್ಯೋತ್ಸವ ದಿನದಂದು ವಿಜೇತ ವಿದ್ಯಾರ್ಥಿಗಳಿಗೆ ನಗದು ಬಹುಮಾನ ಹಾಗೂ ಪಾರಿತೋಷಕ ನೀಡುವ ಉದ್ದೇಶ ಹೊಂದಲಾಗಿದೆ. ತಾಲ್ಲೂಕಿನ ಹೋಬಳಿ ಮಟ್ಟದಲ್ಲೂ ಸಹ ಕನ್ನಡದ ಕಂಪನ್ನು ಅರಳಿಸಲು ವಿಶೇಷ ಕಾರ್ಯಕ್ರಮಗಳನ್ನು ರೂಪಿಸಲು ಪರಿಷತ್ ನಿರ್ಧರಿಸಿದೆ. ಎಲ್ಲಾ ಸ್ವಹೃದಯಿ ಕನ್ನಡಿಗರ ಸಹಕಾರದಿಂದ ಮಾತ್ರ ಕನ್ನಡದ ಚಿನ್ನದ ತೇರನ್ನು ಎಳೆಯಲು ಸಾಧ್ಯವೆಂದರು.

### ಪ್ರಮುಖ ಸುದ್ದಿ

# ಕಾಂಗ್ರೆಸ್ ಆಡಳಿತದಲ್ಲಿ ರೈತರು ಅತಂತ್ರ: ರಂಗಸ್ವಾಮಿ

» ಚಳ್ಳಕೆರೆ

ರಾಜ್ಯದಲ್ಲಿ ಆಡಳಿತ ನಡೆಸುತ್ತಿರುವ ಕಾಂಗ್ರೆಸ್ ಪಕ್ಷದ ಸರ್ಕಾರ ರೈತ ಸಮುದಾಯಕ್ಕೆ ಯಾವುದೇ ಭರವಸೆ ನೀಡದೆ ರೈತರ ಸಂಕಷ್ಟಗಳಿಗೆ ಸ್ಪಂದಿಸದೆ ರೈತರ ಏಳಿಗೆಯನ್ನು ಸಹ ಬಯಸದ ಸರ್ಕಾರವಾಗಿದೆ. ಮಳೆ, ಬೆಳೆ ಇಲ್ಲದೆ ಸೊರಗಿರುವ ರೈತರಿಗೆ ಆರ್ಥಿಕ ಶಕ್ತಿ ತುಂಬಲು ಸರ್ಕಾರ ಮುಂದಾಗಬೇಕು ಇಲ್ಲವಾದರಲ್ಲಿ ಬೀದಿಗಳಿದು ಉಗ್ರ ಹೋರಾಟ ನಡೆಸುವುದಾಗಿ ಅಖಂಡ ಕರ್ನಾಟಕ ರೈತ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಸೋಮಗುದ್ದುರಂಗಸ್ವಾಮಿ ತಿಳಿಸಿದರು.

ಅವರು, ರೈತ ಸಂಘ ಹಮ್ಮಿಕೊಂಡಿದ್ದ ಬೃಹತ್ ಚಳಿವಳಿಯ ಮೆರವಣಿಗೆಗೆ ಚಳ್ಳಕೆರೆಯಮ್ಮ ದೇವಸ್ಥಾನದ ಬಳಿ ಚಾಲನೆ ನೀಡಿ, ನೆಹರೂ ವೃತ್ತದಲ್ಲಿ ರಸ್ತೆ ತಡೆದು ಪ್ರತಿಭಟನಕಾರರನ್ನು ಉದ್ದೇಶಿಸಿ ಮಾತನಾಡಿದರು. ರೈತರು ಬೆಳೆದ ಎಲ್ಲಾ ಬೆಳೆಗೆ ಎಕರೆಗೆ 10 ಸಾವಿರ ಪರಿಹಾರ ನೀಡಬೇಕು, ಮಳೆ, ಬೆಳೆ ಹಾನಿ ತಕ್ಷಣ ನೀಡಬೇಕು, ಸಮಪರ್ಕವಾಗಿ ವಿದ್ಯುತ್ ಸಂಪರ್ಕ ನೀಡಬೇಕು, ರೈತರ ಬೇಡಿಕೆಗಳ ಈಡೇರಿಕೆಗೆ ಮೊದಲ ಆದ್ಯತೆ ನೀಡಬೇಕು, ಬೆಳೆ ನಷ್ಟ ಪರಿಹಾರದ ಜೊತೆಗೆ ರೈತರ ಬೆಳೆ ವಿಮೆ ಹಣವನ್ನು ದೋಚಿದ ಅಧಿಕಾರಿಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದರು. ರೈತ ಸಂಘದ ಹಿರಿಯ ಮುಖಂಡ ಧಾರವಾಡದ ಬಿ.ಸಿ.ಪಾಟೀಲ್ ಮಾತನಾಡಿ, ರೈತರಿಗೆ ಆತ್ಮಸ್ಥೈರ್ತ ತುಂಬುವ ಕೆಲಸ ಸರ್ಕಾರ ಮಾಡುತ್ತಿಲ್ಲ, ಎಲ್ಲಾ ಹಂತದಲ್ಲೂ ರೈತರನ್ನು ಶೋಷಣೆ ಮಾಡಲಾಗುತ್ತಿದೆ. ರೈತನ ಸಂಕಷ್ಟಗಳು ದಿನದಿಂದ ದಿನಕ್ಕೇ ಏರಿಕೆಯಾಗುತ್ತಿದ್ದರೂ ಅವರಿಗೆ ಪರಿಹಾರ ರೂಪಿಸುವಲ್ಲಿ ಸರ್ಕಾರ ವಿಫಲವಾಗಿದೆ ಎಂದು ಆರೋಪಿಸಿದರು.



ಪ್ರತಿಭಟನಾ ನಿರತ ಸ್ಥಳಕ್ಕೆ ಆಗಮಿಸಿದ ಶಿರಸ್ತೇದಾರ್ ಸದಾಶಿವಪ್ಪಗೆ ಮನವಿ ನೀಡಲಾಯಿತು. ಈ ಬಗ್ಗೆ ಜಿಲ್ಲಾಧಿಕಾರಿಗಳ ಮೂಲಕ ಸರ್ಕಾರಕ್ಕೆ ಮನವಿ ಕಳಿಸುವ ಭರವಸೆ ನೀಡಿದರು. ಪ್ರತಿಭಟನೆಯಲ್ಲಿ ತಾಲ್ಲೂಕು ಅಧ್ಯಕ್ಷ ಕೆ.ಚಿಕ್ಕಣ್ಣ, ಪ್ರಧಾನ ಕಾರ್ಯದರ್ಶಿ ಎಚ್.ಪ್ರಕಾಶ್, ಕಾರ್ಯಾಧ್ಯಕ್ಷ ಹನುಮಂತರಾಯ, ಗೌರವಾಧ್ಯಕ್ಷ ಕೃಷ್ಣಮೂರ್ತಿಸ್ವಾಮಿ, ಜಂಪಣ್ಣ, ಎಂ.ಜಿ.ಶಿವಶಂಕರಮೂರ್ತಿ, ಖಾದರ್‌ಭಾಷ, ನರಸಿಂಹಪ್ಪ, ನಾಗೇಂದ್ರಪ್ಪ, ಗಿರೀಶ್‌ರೆಡ್ಡಿ, ನವೀನ್‌ಗೌಡ ಮುಂತಾದವರು ಪಾಲ್ಗೊಂಡಿದ್ದರು.

## ಫಾಸ್ಟ್ ನ್ಯೂಸ್

### 2022-23ನೇ ಸಾಲಿನ ಮಕ್ಕಳ ಪುಸ್ತಕ ಚಂದಿರ ಪ್ರಶಸ್ತಿಗೆ ಅರ್ಜಿ ಆಹ್ವಾನ

» ದಾವಣಗೆರೆ

ಕರ್ನಾಟಕ ಬಾಲವಿಕಾಸ ಅಕಾಡೆಮಿಯಿಂದ ಪ್ರಸಕ್ತ ಸಾಲಿನ ಮಕ್ಕಳ ಪುಸ್ತಕ ಚಂದಿರ ಪ್ರಶಸ್ತಿಗೆ ಉತ್ತಮ ಪುಸ್ತಕಗಳನ್ನು ರಚಿಸಿದ ಮಕ್ಕಳಿಂದ ಅರ್ಜಿ ಆಹ್ವಾನಿಸಲಾಗಿದೆ.ಪ್ರಸಕ್ತ ಸಾಲಿನ ಅವಧಿಯಲ್ಲಿ ಪ್ರಕಟಣೆಗೊಂಡ ಸ್ವರಚಿತ ಕವನ ಸಂಕಲನ, ಕಥಾ ಸಂಕಲನ, ಪಠ್ಯಾಧಾರಿತ ಹೊರತುಪಡಿಸಿ ಮಕ್ಕಳ ಕಾದಂಬರಿ, ವೈಜ್ಞಾನಿಕ ಲೇಖನಗಳ ಕವನ ಸಂಕಲನ, ಅನಿವಾದಿತ ಕೃತಿ(ಯಾವುದೇ ಪ್ರಕಾರದ ಮಕ್ಕಳ ಸಾಹಿತ್ಯ) ಮಕ್ಕಳ ಸಾಹಿತ್ಯ ವಿಮರ್ಶಾ ಕೃತಿ ಒಟ್ಟಾರೆಯಾಗಿ 7 ಪ್ರಕಾರದ ಮಕ್ಕಳ ಸಾಹಿತ್ಯ ಕೃತಿಯನ್ನು ಪ್ರಶಸ್ತಿಗಾಗಿ ಆಹ್ವಾನಿಸಲಾಗಿದ್ದು, ಪುಸ್ತಕಗಳ 4 ಪ್ರತಿಗಳು ಹಾಗೂ ಸ್ವವಿವರಗಳನ್ನೊಳಗೊಂಡ ಮನವಿಯೊಂದಿಗೆ ಅಕಾಡೆಮಿ ಕೇಂದ್ರ ಕಚೇರಿ ವಿಳಾಸಕ್ಕೆ ಅಂಚೆ ಮೂಲಕ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಡಿಸೆಂಬರ್ 4 ಕೊನೆಯ ದಿನವಾಗಿರುತ್ತದೆ.ಹೆಚ್ಚಿನ ಮಾಹಿತಿಗಾಗಿ ಯೋಜನಾಧಿಕಾರಿಗಳು, ಕರ್ನಾಟಕ ಬಾಲವಿಕಾಸ ಅಕಾಡೆಮಿ, ಚಂದ್ರಿಕಾ ಲೇ ಔಟ್ ಹಿಂಬಾಗ, ಕೆ.ಹೆಚ್.ಬಿ ಕಾಲೋನಿ, ಲಕಮನಹಳ್ಳಿ, ಧಾರವಾಡ ದೂ.ಸಂ. 0836 2461666 ಗೆ ಸಂಪರ್ಕಿಸಲು ಜಿಲ್ಲಾ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ವಾಸಂತಿ ಉಪ್ಪಾರ್ ತಿಳಿಸಿದ್ದಾರೆ.

### ನ.23ಕ್ಕೆ ವಿಕಲಚೇತನರಿಗೆ ಕ್ರೀಡಾ ಸ್ಪರ್ಧೆ

» ದಾವಣಗೆರೆ

ವಿಶ್ವ ವಿಕಲಚೇತನರ ದಿನಾಚರಣೆ ಪ್ರಯುಕ್ತ ನವೆಂಬರ್ 23 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಮೋತಿ ವೀರಪ್ಪ ಕಾಲೇಜು ಮೈದಾನದಲ್ಲಿ ವಿಕಲಚೇತನರಿಗಾಗಿ ಕ್ರೀಡಾ ಸ್ಪರ್ಧೆಗಳನ್ನು ಏರ್ಪಡಿಸಲಾಗಿದೆ.ಮಹಿಳಾ ಮತ್ತು ಪುರುಷ ವಿಕಲಚೇತನರಿಗೆ ಪ್ರತ್ಯೇಕವಾಗಿ ಸ್ಪರ್ಧೆಗಳನ್ನು ನಡೆಸಲಾಗುತ್ತಿದ್ದು, ಕ್ರೀಡಾ ಸ್ಪರ್ಧೆಯಲ್ಲಿ ದೈಹಿಕ ವಿಕಲಚೇತನರಿಗೆ ನಿಧಾನಗತಿ ಬೈಕ್ ರೇಸ್, ಶಾಟ್‌ಪುಟ್, ಜಾವಲಿನ್ ಥ್ರೋ, ಮ್ಯೂಸಿಕಲ್ ಚೇರ್, ಸಂಪೂರ್ಣ ದೃಷ್ಟಿದೋಷವುಳ್ಳವರಿಗೆ 50 ಮೀ. ರನ್ನಿಂಗ್ ರೇಸ್, ಶಾಟ್‌ಪುಟ್, ಮ್ಯೂಸಿಕಲ್ ಚೇರ್, ಚೆಸ್, ಕೇರಂ ವಾಕ್ ಮತ್ತು ಶ್ರವಣದೋಷವುಳ್ಳವರಿಗೆ 100ಮೀ ರನ್ನಿಂಗ್ ರೇಸ್, ಜಾವಲಿನ್ ಥ್ರೋ, ಶಾಟ್‌ಪುಟ್, ಕೇರಂ, ಚೆಸ್ ಬೆನ್ನುಹುರಿ ಅಪಘಾತ ಹೊಂದಿರುವವರಿಗೆ ಚೆಸ್, ಕೇರಂ ಮತ್ತು ವೀಲ್‌ಚೇರ್ ರೇಸ್ ಕ್ರೀಡೆಗಳನ್ನು ಆಯೋಜಿಸಲಾಗಿದೆ. ಆಸಕ್ತ ವಿಕಲಚೇತನರು ಆಯಾ ತಾಲ್ಲೂಕು ವಿವಿಧೋದ್ದೇಶ ಪುನರ್ವಸತಿ ಕಾರ್ಯಕರ್ತರಾದ ಶೈಲಜಾ ಕೆ.ಎಂ ಮೊ.ನಂ. 9886366809 (ಹೊನ್ನಾಳಿ), ಕೆ ಸುಬ್ರಮಣ್ಯಂ ಮೊ.ನಂ. 9945738141 (ಚನ್ನಗಿರಿ), ಎಂ.ಕೆ ಶಿವನಗೌಡ ಮೊ.ನಂ. 9902105734 (ಜಗಳೂರು), ಶಶಿಕಲಾ ಟಿ. ಮೊ.ನಂ. 9945458058, (9945458058), ಚನ್ನಪ್ಪ.ಬಿ ಮೊ.ನಂ. 9590829024 (ದಾವಣಗೆರೆ) ಇವರನ್ನು ಸಂಪರ್ಕಿಸಿ ಹೆಸರು ನೋಂದಾಯಿಸಿಕೊಳ್ಳುವ ಮೂಲಕ ಸ್ಪರ್ಧೆಯಲ್ಲಿ ಭಾಗವಹಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ದೂ.ಸಂ. 08192-263936 ಅಥವಾ ಜಿಲ್ಲಾ ವಿಕಲಚೇತನರ ಸಹಾಯವಾಣಿ ಕೇಂದ್ರ ಸ.ಸಂ 08192 263939 ಗೆ ಸಂಪರ್ಕಿಸಲು ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣಾಧಿಕಾರಿ ಡಾ.ಕೆ.ಕೆ. ಪ್ರಕಾಶ್ ತಿಳಿಸಿದ್ದಾರೆ.

### ಅಪ್ರೆಂಟಿಸ್ ತರಬೇತಿಗೆ ಪ.ಜಾತಿ ಪತ್ರಿಕೋದ್ಯಮ ಅಭ್ಯರ್ಥಿಗಳಿಂದ ಅರ್ಜಿ

» ದಾವಣಗೆರೆ

ಪರಿಶಿಷ್ಟ ಜಾತಿಗೆ ಸೇರಿದ ಪತ್ರಿಕೋದ್ಯಮ ಪದವೀಧರರಿಗೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ 2024ರ ಜನವರಿಯಿಂದ ಡಿಸೆಂಬರ್ ಅವಧಿಯ 12 ತಿಂಗಳ ಅಪ್ರೆಂಟಿಸ್ ತರಬೇತಿಯನ್ನು ಹಮ್ಮಿಕೊಂಡಿದ್ದು, ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಸಲು ಡಿಸೆಂಬರ್ 5 ಕೊನೆಯ ದಿನವಾಗಿದೆ. ಪರಿಶಿಷ್ಟ ಜಾತಿಯ ಇಬ್ಬರು ಅಭ್ಯರ್ಥಿಯನ್ನು ಮೆರಿಟ್ ಮತ್ತು ಸಂದರ್ಶನದ ಮೂಲಕ ಆಯ್ಕೆ ಮಾಡಿಕೊಳ್ಳಲಾಗುವುದು. ಆಯ್ಕೆಯಾದ ಅಭ್ಯರ್ಥಿಗೆ ಮಾಹೆಯಾನ 15 ಸಾವಿರ ರೂ. ಗಳ ಶಿಷ್ಯವೇತನ ನೀಡಲಾಗುವುದು. ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ ಕ್ಷೇತ್ರ ಪ್ರಚಾರ, ಸುದ್ದಿ ಸಂಗ್ರಹ ಮತ್ತು ರಚನೆ ಕುರಿತಂತೆ ತರಬೇತಿ ನೀಡಲಾಗುವುದು ಅಭ್ಯರ್ಥಿಯು ಮಾನ್ಯತೆ ಪಡೆದ ವಿಶ್ವವಿದ್ಯಾನಿಲಯದಿಂದ ಪತ್ರಿಕೋದ್ಯಮದಲ್ಲಿ ಪದವಿ ಅಥವಾ ಸ್ನಾತಕೋತ್ತರ ಪದವಿ ಪೂರ್ಣಗೊಳಿಸಿರಬೇಕು. ಕಂಪ್ಯೂಟರ್ ಜ್ಞಾನ ಹೊಂದಿದ್ದು, ಕನ್ನಡ ಭಾಷೆ ಬಳಕೆಯಲ್ಲಿ ಪ್ರಬುದ್ಧತೆ ಹೊಂದಿರಬೇಕು. ವಯೋಮಿತಿಯು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು 35 ವರ್ಷದೊಳಗಿರಬೇಕು. ಆಯ್ಕೆಯಾದ ಅಭ್ಯರ್ಥಿಗಳು ತರಬೇತಿ ಅವಧಿಯಲ್ಲಿ ಬೇರೆ ಉದ್ಯೋಗ ಮಾಡುವಂತಿಲ್ಲ. ಇಲಾಖೆಯಲ್ಲಿ ಈ ಹಿಂದೆ ತರಬೇತಿ ಪಡೆದವರು ಪುನಃ ಅರ್ಜಿ ಸಲ್ಲಿಸುವಂತಿಲ್ಲ.

# ಬೆಂಗ್ಳೂರಲ್ಲಿ 72 ಗಂಟೆ ದುಡಿವ ಜನರ ಸತ್ಯಾಗ್ರಹ

» ಚಿತ್ರದುರ್ಗ

ಕೇಂದ್ರ ಮತ್ತು ರಾಜ್ಯ ಸರ್ಕಾರದ ಜನ ವಿರೋಧಿ ನೀತಿಯನ್ನು ವಿರೋಧಿಸಿ ಬೆಂಗಳೂರಿನಲ್ಲಿ ನ. 26 ರಿಂದ 28ರವರೆಗೆ 72 ಗಂಟೆಗಳ ಕಾಲ ಫ್ರೀಡಂ ಪಾರ್ಕ್‌ನಲ್ಲಿ ದುಡಿಯುವ ಜನರ ಮಹಾ ಸತ್ಯಾಗ್ರಹವನ್ನು ಹಮ್ಮಿಕೊಳ್ಳಲಾಗಿದೆ ಎಂದು ಭೂಮಿ ಮತ್ತು ಹಕ್ಕು ವಂಚಿತರ ಹೋರಾಟ ಸಮಿತಿಯ ರಾಜ್ಯ ಕಾರ್ಯದರ್ಶಿ ಕುಮಾರ್ ಸಮತಳ ರವರು ತಿಳಿಸಿದರು.



ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ಸರ್ಕಾರಿ ಕಂದಾಯ ಭೂಮಿ ಗೋಮಾಳ, ಖರಾಬು, ಪೋರಂಬೂಕ ಅರಣ್ಯ ಹುಲ್ಲುಬನ್ನಿ ಸೇಂದಿವನ, ಕಾವಲು ಸೋಪ್ಪಿನ ಬೆಟ್ಟ ಅಮೃತ್ ಮಹಲ್ ಕಾವಲುಗಳನ್ನು ಒಳಗೊಂಡಂತೆ ಲಕ್ಷಾಂತರ ಎಕರೆ ಭೂಮಿಯಲ್ಲಿ ಕುಟುಂಬಗಳು ಉಳುಮೆ ಮಾಡುತ್ತಾ ಜೀವನ ಸಾಗಿಸುತ್ತಿದ್ದಾರೆ. ಈ ಭೂಮಿ ಹಕ್ಕಿಗಾಗಿ ದಶಕಗಳಿಂದ ಅರ್ಜಿಯನ್ನು ಸಲ್ಲಿಸಿ ಭೂಮಿಗಾಗಿ ಕಾತುರದಿಂದ ಇಂದು ಸಿಕ್ಕಿತು ನಾಳೆ ಸಿಕ್ಕಿತು ಎಂದು ಭರವಸೆಯ ಮೇಲೆ ಕಾಯುತ್ತಿದ್ದಾರೆ. ಈ ಮಧ್ಯದಲ್ಲಿ ನಮ್ಮನ್ನು ಇಲ್ಲಿಂದ ಹೊರ ದಬ್ಬುವ ಕಾನೂನುಗಳು ಬರುತ್ತವೆಯೂ ಎಂಬ ಆಂತಕ ಎದುರಾಗಿದೆ. ಈ ಮಧ್ಯದಲ್ಲಿಯೇ ಭೂಮಿಯನ್ನು ಸಾಗುವಳಿ ಮಾಡಲಾಗುತ್ತಿದೆ ಎಂದರು.

'ಉಳುವವನೇ ಹೊಲದೊಡೆಯ' ಘೋಷಣೆ ಭೂರಹಿತರಿಗೆ ಜೀವನದಲ್ಲಿ ಹೊಸ ಬೆಳಕನ್ನೇ ತೋರಿಸಿತು. ಅದೇ ಸಮಯದಲ್ಲಿ ಕಾಯ್ದೆ ಇನ್ನೆಷ್ಟು ಶೋಷಿತ ಜನರನ್ನು ತಲುಪಬೇಕಿತ್ತೋಅಷ್ಟನ್ನು ತಲುಪದೇ ಇರುವುದು ಈ ಖಾಯ್ದೆಯ ಮಿತಿಯನ್ನು ತೋರಿಸುತ್ತದಾದರೂ, ಜಾರಿ ಮಾಡುವವರ ಇಚ್ಛಾಶಕ್ತಿಯ ಕೊರತೆಯೇ ಹೆಚ್ಚು ಆದಿವಾಸಿ ಜನರಿಗೆ ಒತ್ತಾಸೆಯಾಗಿ '2006ರ ಅರಣ್ಯ ಹಕ್ಕು ಕಾಯ್ದೆ' ಜಾರಿಗೆ ಬಂದರೂ 'ಲೆಕ್ಕಕ್ಕಿದೆ. ಜಾರಿಗಿಲ್ಲ' ಯನ್ನುವಂತಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಅಧಿಕಾರಿಗಳು ತಮಗಿಷ್ಟ ಬಂದಂತೆ ನೋಡುವ ಹಾಗಾಗಿದೆ. ಮಲೆನಾಡು ಭಾಗದಲ್ಲಂತೂಬಡಜನರನಿದ್ದೆಗೆಡಿಸಿದ್ದಾರೆ. ಹತ್ತಾರು ನೂರೆಂಟು ನಿಯಮಗಳು, ಸರ್ಕಾರಿ, ಪೈಸಾರಿ, ಗೋಮಾಳ, ಸೊಪ್ಪಿನ ಬೆಟ್ಟ ಭೂಮಿಗಳೆಲ್ಲವೂ ನಮ್ಮವೇ ಎಂದು ಹೇಳುತ್ತಾ ಕಾಡೊಳಗಿನ ಆದಿವಾಸಿಗಳು, ಕಾಡಂಚಿಲ್ಲಿರುವಕಾಡನ್ನೇಅವಲಂಬಿಸಿರುವ ಬುಡಕಟ್ಟು ಸಮುದಾಯಗಳಲ್ಲದೆ ಇನ್ನಿತರೆ ಜನ ಪ್ರತಿನಿತ್ಯ ಸಂಘರ್ಷ ಏರ್ಪಟ್ಟಿದೆ. ಬಯಲು ಪ್ರದೇಶಗಳಲ್ಲೂ ಇದೇ ಪರಿಸ್ಥಿತಿ. ಅರಣ್ಯ ಹಕ್ಕು ಕಾಯ್ದೆಯ ಬಗ್ಗೆ ತಿಳುವಳಿಕೆಯೇ ಇಲ್ಲದ ಆಳುವವರಿಂದಾಗಿ 'ಗ್ರಾಮ ಅರಣ್ಯ ಹಕ್ಕು ಸಮಿತಿ' ಸಮಿತಿಗಳ ರಚನೆಯೇ ಆಗಿಲ್ಲ. ಅಧಿಕಾರಿಗಳೇ ಕಾನೂನನ್ನು ಉಲ್ಲಂಘಿಸುತ್ತಿದ್ದಾರೆ ಎಂದು ದೂರಿದರು.

ಕೇಂದ್ರದ ಬಿಜೆಪಿ ಸರ್ಕಾರ ಕಾರ್ಪೋರೇಟ್ ಕಂಪನಿಗಳಿಗೆ ಅನುಕೂಲವಾಗುವಂತಹ ಆರ್ಥಿಕ ನೀತಿಗಳನ್ನು ಜಾರಿಗೊಳಿಸಿ ದೇಶದ ಜನರನ್ನು ದಾಸರನ್ನಾಗಿಸುತ್ತಿದೆ. ದೇಶದ 64 ಭೂಮಿಯನ್ನು ಕಂಪನಿಗಳಿಗೆ ಕೊಡಲು ರೂಪಿಸಿದ್ದ ಕೃಷಿ ಕಾಯ್ದೆಗಳ ವಿರುದ್ಧ ರೈತರು ದೆಹಲಿಗೆ ಒಂದು ವರ್ಷಕಾಲ ಮುತ್ತಿಗೆ ಹಾಕಿ ಸರ್ಕಾರವನ್ನು ಮಣಿಸಿದ್ದು ಎಲ್ಲರಿಗೂ ಗೊತ್ತೇ ಇದೆ. ಸೋಲೊಪ್ಪಿಕೊಳ್ಳದ ಕೇಂದ್ರ ಸರ್ಕಾರ ಬಿಜೆಪಿ ಆಡಳಿತವಿರುವ ರಾಜ್ಯಗಳಲ್ಲಿ ಜನವಿರೋಧಿ ನೀತಿಗಳನ್ನು ರಾಜ್ಯ ಸರ್ಕಾರಗಳ ಮೂಲಕ ಜಾರಿಗೊಳಿಸುವ ಹುನ್ನಾರ ತಾನೆಷ್ಟು ಕಾರ್ಪೋರೇಟ್ ಕಂಪನಿಗಳ ಪರವಾಗಿದ್ದೇನೆಂದು ಸಾಬೀತು ಪಡಿಸಿದೆ. ಇದೆಲ್ಲದರ ಪರಿಣಾಮವಾಗಿ ಗ್ರಾಮೀಣ ಭಾಗದಲ್ಲಿ ಭೂ ರಹಿತರು. ಅತೀ ಸಣ್ಣ ರೈತರ ಸಂಖ್ಯೆ ಹೆಚ್ಚಾಗುತ್ತಾ ಬದುಕಿಗಾಗಿ ದೂರದ ಊರು, ಪಟ್ಟಣಗಳಲ್ಲಿ ಅಲೆಯುತ್ತಿದ್ದಾರೆ ಎಂದರು.

ಸರ್ಕಾರ ಕೂಡಲೇ ಬಗರ್ ಹುಕುಂ ಸಮಿತಿಗಳನ್ನು ರಚಿಸಬೇಕು. ಮತ್ತು ಅರ್ಜಿ ಸಲ್ಲಿಸಿ ಸಾಗುವಳಿ ಮಾಡುತ್ತಿರುವ ಎಲ್ಲಾ ಭೂರಹಿತರಿಗೆ ಭೂಮಿಯ ಹಕ್ಕುಪತ್ರ ನೀಡಬೇಕು.ಅರ್ಜಿ ಸಲ್ಲಿಸಿದ ರೈತರನ್ನು ಯಾವುದೇ ಕಾರಣಕ್ಕೂ ಭೂಮಿಯಿಂದ ಒಕ್ಕಲೇಳಿಸಬಾರದು.ಅರಣ್ಯ ಹಕ್ಕು ಕಾಯ್ದೆ 2006ನ್ನು ಜಾರಿ ಮಾಡುವ ಮೂಲಕ ಅರಣ್ಯವಾಸಿಗಳಿಗೆ ಭೂಮಿ ಮತ್ತು ಅವರು ವಾಸಿಸುವ ಜಾಗಗಳಿಗೆ ಮಂಜೂರಾತಿ ನೀಡಬೇಕು.ಅರಣ್ಯ-ಕಂದಾಯಭೂಮಿಗಳ ಜಂಟಿ ಸರ್ವೆ ನಡೆಸಿ, ಭೂರಹಿತರ ಸಾಗುವಳಿ ಭೂಮಿಗಳಿಗೆ ಹಕ್ಕುಪತ್ರ ನೀಡಬೇಕು. ಅರಣ್ಯ ಅಧಿಕಾರಿಗಳು ರೈತರಿಗೆ ಕಿರುಕುಳ ನೀಡುವುದನ್ನು ನಿಲ್ಲಿಸಬೇಕು. ಅರ್ಜಿ ಸಲ್ಲಿಸಿರುವ ಎಲ್ಲಾ ನಿವೇಶನ ರಹಿತರಿಗೆ ನಿವೇಶನ, ವಸತಿ ರಹಿತರಿಗೆ ವಸತಿ ಹಂಚಿಕೆಯಾಬೇಕು. ಸ್ಲಮ್ ನಿವಾಸಿಗಳಿಗೆ ಹಕ್ಕುಪತ್ರ ನೀಡಬೇಕಲ್ಲದೆ ಅವರ ಜಾಗಗಳಿಗೆ ಭದ್ರತೆ ನೀಡಬೇಕು. ಹಲವು ದಶಕಗಳಿಂದ ಅರ್ಜಿ ಸಲ್ಲಿಸಿರುವ ಲಕ್ಷಾಂತರ ಜನರ, ನಗರ ಮಿತಿ ವ್ಯಪ್ತಿಯಲ್ಲಿ ತಿರಸ್ಕರಿಸಲ್ಪಟ್ಟ/ಪೆಂಡಿಂಗ್ ನಲ್ಲಿರುವ ಎಲ್ಲಾ ಅರ್ಜಿಗಳನ್ನು ಪುನರ್ ಪರಿಶೀಲಿಸಿ ಒಂದು ಬಾರಿ ಅವಕಾಶ (ಒನ್ ಟೈಮ್ ಸೆಟಲ್ ಮೆಂಟ್) ಕಲ್ಪಿಸುವ ದೊರಕಿಸಿಕೊಡಬೇಕು. ಮೂಲಕ ನ್ಯಾಯದೊರಕಿಸಿಕೂಡಬೇಕು ಎಂದು ಆಗ್ರಹಿಸಿದರು.

ರೈತರ ಉತ್ಪನ್ನಗಳಿಗೆ ಎಂ.ಎಸ್. ಸ್ವಾಮಿನಾಥನ್ ಶಿಫಾರಸ್ಸಿನಂತೆ ಬೆಂಬಲ ಬೆಲೆ ಹಾಗೂ ಖರೀದಿ ಖಾತ್ರಿ ಒದಗಿಸುವ ಕಾನೂನು ಜಾರಿ ಮಾಡಬೇಕು. ರೈತರಿಗೆ ನೀಡುವ ಬಿತ್ತನೆ ಬೀಜ, ರಸಗೊಬ್ಬರ, ಕ್ರಿಮಿನಾಶಕ ಹಾಗೂ ವಿದ್ಯುಚ್ಛಕ್ತಿ ಮೇಲಿನ ಸಬ್ಸಿಡಿಮೊತ್ತಸಿರುವಕಾನೂನುಹೆಚ್ಚಿಸಬೇಕು. ಎಪಿಎಂಸಿಯನ್ನು ರದ್ದುಗೊಳಿಸಿರುವ ವಾಪಸ್ ತೆಗೆದುಕೊಳ್ಳಬೇಕು.ಭೂಮಿಗಾಗಿ ಹೋರಾಟ ನಡೆಸಿದವರ ಮೇಲೆ ದಾಖಲಿಸಿರುವ ಪೊಲೀಸ್ ಕೇಸುಗಳನ್ನು ವಾಪಸ್ ಪಡೆಯಬೇಕು. ಕೈಗಾರಿಕೆ/ಅಭಿವೃದ್ಧಿ ಹೆಸರಿನಲ್ಲಿ ರೈತರ ಒಪ್ಪಿಗೆಯಿಲ್ಲದೆ, ಭೂಮಿಯನ್ನು ಸ್ವಾಧೀನ ಮಾಡಿಕೊಳ್ಳಬಾರದು ಎಂದು ಸರ್ಕಾರವನ್ನು ಒತ್ತಾಯಿಸಿದ್ದಾರೆ.

ಈ ಹಿನ್ನಲೆಯಲ್ಲಿ ಬೆಂಗಳೂರಿನಲ್ಲಿ ನ. 26 ರಿಂದ 28ರವರೆಗೆ 72 ಗಂಟೆಗಳ ಕಾಲ ಫ್ರೀಡಂ ಪಾರ್ಕನಲ್ಲಿ ದುಡಿಯುವ ಜನರ ಮಹಾ ಸತ್ಯಾಗ್ರಹವನ್ನು ಹಮ್ಮಿಕೊಳ್ಳಲಾಗಿದೆ. ಇದರಲ್ಲಿ ರಾಜ್ಯದ ವಿವಿದೆಡೆಗಳಿಂದ ಸಾವಿರಾರು ದುಡಿಯುವ ಜನತೆ ಬರಲಿದ್ದಾರೆ ಚಿತ್ರದುರ್ಗದಿಂದಲೂ ಸಹಾ ಸಾವಿರ ಜನತೆ ಭಾಗವಹಿಸಲಿದ್ದಾರೆ ಎಂದರು.

ಗೋಷ್ಠಿಯಲ್ಲಿ ಭೂಮಿ ಮತ್ತು ವಸತಿ ಹಕ್ಕು ವಂಚಿತರ ಹೋರಾಟ ಸಮಿತಿಯ ಜಿಲ್ಲಾಧ್ಯಕ್ಷರಾದ ಸತ್ಯಪ್ಪ ಮಲ್ಲಾಪುರ, ಜಿಲ್ಲಾ ಕಾರ್ಯದರ್ಶಿ ಹನುಮಂತಪ್ಪಗೋನೂರು, ಜಿಲ್ಲಾ ಮುಖಂಡರುಗಳಾದ ವೆಂಕಟೇಶ್ ಬಿಬಿಹಟ್ಟಿ, ಸುನಂದಮ್ಮ, ಸಣ್ಣ ವೀರಪ್ಪ ಸೇರಿದಂತೆ ಇತರರು ಭಾಗವಹಿಸಿದ್ದರು.

# ತಳುಕು ಪಂಚಾಯಿತಿ ಪಿಡಿಓ ನೇಮಕಕ್ಕೆ ಆಗ್ರಹ



» ಚಿತ್ರದುರ್ಗ

ಚಿತ್ರದುರ್ಗ ಜಿಲ್ಲೆಯ ಚಳ್ಳಕೆರೆ ತಾಲ್ಲೂಕಿನ ತಳಕು ಗ್ರಾಮ ಪಂಚಾಯಿತಿಗೆ ಕಾಯಂ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯನ್ನು ನೇಮಕ ಮಾಡುವಂತೆ ತಳಕು ಗ್ರಾಮ ಪಂಚಾಯಿತಿಯ ಸದಸ್ಯರು ಜಿ.ಪಂ. ಮತ್ತು ತಾಲ್ಲೂಕು ಪಂಚಾಯಿತಿ ಅಧಿಕಾರಿಗಳನ್ನು ಒತ್ತಾಯಿಸಿದ್ದಾರೆ.ಚಿತ್ರದುರ್ಗ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಗ್ರಾಮ ಪಂಚಾಯಿತಿ ಸದಸ್ಯ ಕರಿಂಸಾಬ್, ತಳಕು ಪಂಚಾಯಿತಿ ಮೊಳಕಾಲ್ಮೂರು ವಿಧಾನಸಭಾ ವ್ಯಾಪ್ತಿಗೆ ಬರುವ 4 ಹೋಬಳಿ ಮುಖ್ಯ ಕೇಂದ್ರವಾಗಿದ್ದು, 23 ಜನ ಸದಸ್ಯ ಬಲವನ್ನು ಹೊಂದಿದ್ದು, 5 ಹಳ್ಳಿಗಳಿಂದ ಕೂಡಿದ ಪಂಚಾಯಿತಿ ಆಗಿದೆ. ಹಳ್ಳಿಗೆ 4 ರಿಂದ 5 ಮುಜರೆ ಗ್ರಾಮಗಳು ಸೇರಿ 25 ಗ್ರಾಮಗಳನ್ನು ಹೊಂದಿ ಕೊಂಡಿದೆ. ಈ ಪಂಚಾಯಿತಿಯಲ್ಲಿ ಎ ಗ್ರೇಡ್ ಕಾರ್ಯದರ್ಶಿಗಳು ವಾರದಲ್ಲಿ 3 ದಿನ ಮಾತ್ರ ಕೆಲಸಕ್ಕೆ ಬರುತ್ತಾರೆ. ಇದರಿಂದಾಗಿ ಗ್ರಾಮದ ಅಭೀವೃದ್ದಿಯಾಗುತ್ತಿಲ್ಲ, 45 ಸಾವಿರ ಜನಸಂಖ್ಯೆಯನ್ನು ಹೊಂದಿರುವ ಪಂಚಾಯಿತಿಯಲ್ಲಿ ಶಶ್ವಾತವಾದ ಪಿಡಿಓ ಇಲ್ಲ ಇದರಿಂದ ತುಂಬಾ ತೊಂದರೆಯಾಗಿದೆ ಎಂದು ದೂರಿದರು.ಪಿಡಿಓ ಇಲ್ಲದಿರುವುದರಿಂದ ನರೇಗಾ ಯೋಜನೆಯಲ್ಲಿ 15ನೇ ಹಣಕಾಸು ವರ್ಗ-1 ಹಾಗೂ ಮುಖ್ಯಮಂತ್ರಿಗಳ ಬಜೆಟ್ ಘೋಷಣೆಯ ಕ್ರೀಯಾ ಯೋಜನೆ ಮಾಡಿಲ್ಲ, ಇದ್ದಲ್ಲದೆ ಮೊಳಕಾಲ್ಮೂರು ತಾಲ್ಲೂಕು ಬರಗಾಲಕ್ಕೆ ತುತ್ತಾಗಿದ್ದು, ಎನ್.ಆರ್.ಇ.ಜಿ. ಕೆಲಸ ಕುಡಿಯುವ ನೀರು ವಿದ್ಯುತ್ ದೀಪ, ಚರಂಡಿ ಮತ್ತು ರಸ್ತೆಗಳ ಆಭೀವೃದ್ದಿ ಕಂಠಿತವಾಗಿದೆ ಎಂದರು. ತಳಕು ಪಂ ಮೂಲತ ಪಿಡಿಓ ಸುಮಾರು 32 ತಿಂಗಳುಗಳಿಂದ ವೇತನ ಮಾತ್ರ ಪಡೆಯುತ್ತಿದ್ದು ಕೆಲಸ ಮಾಡುತ್ತಿಲ್ಲ, ಅಲ್ಲದೆ ಅವರು ಎಲ್ಲಿ ಕೆಲಸ ಮಾಡುತ್ತಿದ್ದಾರೂ ಸಹಾ ಗೊತ್ತಿಲ್ಲ, ಪಂಚಾಯಿತಿ ಅಸ್ಥಿತ್ವಕ್ಕೆ ಬಂದು 32 ತಿಂಗಳಾಗಿದ್ದು, ಇದುವರೆವಿಗೂ 9 ಜನ ಪಿಡಿಓಗಳು ಬಂದು ಹೋಗಿದ್ದಾರೆ. ಇದರಿಂದಾಗಿ ಪಂಚಾಯಿತಿ ಅಭೀವೃದ್ದಿ ಕುಂಠಿತವಾಗಿದೆ, ಈ ಹಿನ್ನಲೆಯಲ್ಲಿ ತಳಕು ಪಂಚಾಯಿತಿಗೆ ಶಶ್ವಾತವಾದ ಪಿಡಿಓರನ್ನು ನೀಡುವಂತೆ ಜಿ.ಪಂ. ಸಿಇಓ ಮತ್ತು ತಾ.ಪಂ. ಇಓರವರಿಗೆ ಮನವಿ ಮಾಡಲಾಗುತ್ತಾದರೂ ಇದುವರೆವಿಗೂ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಕರೀಂಸಾಬ್ ಆರೋಪಿಸಿದರು.

ಜಿ.ಪಂ. ಮತ್ತು ತಾ.ಪಂ. ತಳಕು ಪಂಚಾಯಿತಿಗೆ ಶಶ್ವಾತವಾದ ಪಿಡಿಓರವರನ್ನು ಶೀಘ್ರವಾಗಿ ನೇಮಕ ಮಾಡದಿದ್ದರೆ ಮುಂದಿನ ದಿನದಲ್ಲಿ ಜಿ.ಪಂ. ಮುಂದೆ ಗ್ರಾಮ ಪಂಚಾಯಿತಿಯ ಸದಸ್ಯರೆಲ್ಲಾ ಸೇರಿ ಅನಿರ್ಧಿಷ್ಟ ಕಾಲದವರೆಗೆ ದರಣಿಯನ್ನು ನಡೆಸಲಾಗುವುದೆಂದು ಎಚ್ಚರಿಕೆಯನ್ನು ನೀಡಿದರು.

ತಳಕು ಪಂಚಾಯಿತಿ ಸದಸ್ಯರಾದ ಲಕ್ಷ್ಮೀ, ಮಾರಯ್ಯ, ವಾಣಿಬಾಯಿ, ಭಾಗ್ಯಮ್ಮ, ಬಿ.ತಿಪ್ಪೇಸ್ವಾಮಿ, ಶಾಂತ ಕುಮಾರ್ ಭಾಗವಹಿಸಿದ್ದರು.

### ಚರ್ಮ ಕುಶಲ ಕರ್ಮಿಗಳಿಂದ ವಿವಿಧ ಯೋಜನೆಗಳಿಗೆ ಅರ್ಜಿ

ದಾವಣಗೆರೆ: ಡಾ.ಬಾಬು ಜಗಜೀವನ್ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದಿಂದ ಪ್ರಸಕ್ತ ಸಾಲಿನಲ್ಲಿ ವಿವಿಧ ಸ್ವಯಂ ಉದ್ಯೋಗ ಯೋಜನೆಗಳಿಗೆ ಚರ್ಮ ಕುಶಲಕರ್ಮಿಗಳಿಂದ ಸೇವಾ ಸಿಂಧು ಪೋರ್ಟಲ್‌ನಲ್ಲಿ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಡಿಸೆಂಬರ್ 19 ಕೊನೆಯ ದಿನವಾಗಿದೆ.ಹೆಚ್ಚಿನ ಮಾಹಿತಿಗೆ ಮೊ. ನಂ. 9480886279 ಮತ್ತು 7996104988 ಗೆ ಸಂಪರ್ಕಿಸಲು ಡಾ.ಬಾಬು ಜಗಜೀವನ್ ರಾಂ ಚರ್ಮ ಅಭಿವೃದ್ಧಿ ನಿಗಮದ ಜಿಲ್ಲಾ ಸಂಯೋಜಕ ಎಂ. ಗಂಗಾಧರ ತಿಳಿಸಿದ್ದಾರೆ

# ನಿರೌಷಧ ಚಿಕಿತ್ಸಾ ಪದ್ದತಿ ಚಿತ್ರದುರ್ಗದ ಮನೆಮಾತಾಗಿದೆ



» ಚಿತ್ರದುರ್ಗ

ಪ್ರತಿದಿನ ಯೋಗ ಮತ್ತು ಪ್ರಕೃತಿ ಚಿಕಿತ್ಸೆಗೆ 30 ರಿಂದ 40 ರೋಗಿಗಳು ಬಂದು ಆಯುಷ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದು, ನಿರೌಷಧ ಚಿಕಿತ್ಸಾ ಪದ್ಧತಿಯಿಂದ ಸಂಪೂರ್ಣವಾಗಿ ಗುಣವಾಗುತ್ತಿರುವುದು ಅತೀವ ಸಂತೋಷದ ಸಂಗತಿ ಎಂದು ಜಿಲ್ಲಾ ಆಯುಷ್ ಅಧಿಕಾರಿ ಡಾ.ಚಂದ್ರಕಾಂತ್ ನಾಗಸಮುದ್ರ ಹೇಳಿದರು. ಜಿಲ್ಲಾ ಆಯುಷ್ ಇಲಾಖೆ ಮತ್ತು ಜಿಲ್ಲಾ ಆಸ್ಪತ್ರೆ-ಆಯುಷ್ ವಿಭಾಗದ ವತಿಯಿಂದ ಈಚೆಗೆ ಹಮ್ಮಿಕೊಳ್ಳಲಾಗಿದ್ದ 6ನೇ ಪ್ರಕೃತಿ ಚಿಕಿತ್ಸಾ ದಿನೋತ್ಸವ ಉದ್ಘಾಟಿಸಿ ಮಾತನಾಡಿದರು. ಆಯುಷ್ ಆಸ್ಪತ್ರೆಯ ಎಲ್ಲ ಚಿಕಿತ್ಸೆಗಳಿಗೆ ಜನರು ಸ್ಪಂದಿಸಿ ಗುಣಮಟ್ಟದ ಚಿಕಿತ್ಸೆಯನ್ನು ಪಡೆಯುವುದರ ಜೊತೆಗೆ ನಮ್ಮ ಆಯುಷ್ ಚಿಕಿತ್ಸೆಗಳು ಚಿತ್ರದುರ್ಗದ ಮನೆಮಾತಾಗುವಂತಾಗುತ್ತಿವೆ ಎಂದು ತಿಳಿಸಿದರು. ಜಿಲ್ಲಾ ಆಸ್ಪತ್ರೆಯ ಆವರಣದಲ್ಲಿ ಚಿಕಿತ್ಸೆಯನ್ನು ಒದಗಿಸುತ್ತಿದ್ದ ಈ ಆಯುಷ್ ಆಸ್ಪತ್ರೆಯು ಈಗ 3ನೇ ಕ್ರಾಸ್, ಆದಿಶಕ್ತಿ ನಗರಕ್ಕೆ ಸ್ಥಳಾಂತರವಾಗಿದ್ದು ಅಲ್ಲಿ ನೀಡುತ್ತಿದ್ದ ಎಲ್ಲ ಚಿಕಿತ್ಸೆಗಳನ್ನು ಅಂದರೆ ಆಯುರ್ವೇದ ಚಿಕಿತ್ಸೆ, ಯೋಗ ಮತ್ತು ಪ್ರಕೃತಿ ಚಿಕಿತ್ಸೆ, ಹೋಮಿಯೋಪತಿ ಚಿಕಿತ್ಸೆ ಮತ್ತು ಯುನಾನಿ ಚಿಕಿತ್ಸೆಯನ್ನು ಇಲ್ಲಿಯೂ ನೀಡಲಾಗುತ್ತಿದೆ ಎಂದು ತಿಳಿಸಿದ ಅವರು, ಇಲ್ಲಿ ಚಿಕಿತ್ಸೆಯನ್ನು ನೀಡುತ್ತಿರುವ ಎಲ್ಲ ವೈದ್ಯ ಪದ್ಧತಿಯ ವೈದ್ಯರುಗಳಿಗೂ ಮತ್ತು ಸಿಬ್ಬಂದಿಗಳಿಗೂ ಅಭಿನಂದನೆ ತಿಳಿಸಿದರು.ಯೋಗ ಮತ್ತು ಪ್ರಕೃತಿ ಚಿಕಿತ್ಸಾ ವೈದ್ಯಾಧಿಕಾರಿ ಡಾ. ಗಂಗಾಧರ ವರ್ಮ ಮಾತನಾಡಿ, ಆರೋಗ್ಯವಂತನಾದ ಮನುಷ್ಯನೇ ನಿಜವಾದ ಭಾಗ್ಯವಂತನು. ಆರೋಗ್ಯ ಭಾಗ್ಯಕ್ಕಿಂತ ಮಿಗಿಲಾದ ಭಾಗ್ಯವಿಲ್ಲವೆಂಬುದು ಅಕ್ಷರಶಃ ಸತ್ಯೆ ಎಂದರು.

## ಪ್ರಮುಖ ಸುದ್ದಿ

# ಜನಪರ ಕಾರ್ಯದ ಮೂಲಕ ಜನಸೇವೆ ಮಾಡಿ: ಮಾಣಿಕ್ಯ ಪವಾರ್

» ಚಿತ್ರದುರ್ಗ

ರೋಟರಿ ಕ್ಲಬ್ ಚಿನ್ಮೂಲಾದ್ರಿ ಇದೊಂದು ಸೇವಾ ಮನೋಭಾವನೆಯ ಸಂಘಟನೆಯಾಗಿದ್ದು, ಸಾರ್ವಜನಿಕರಿಗಾಗಿ ವಿವಿಧ ರೀತಿಯ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದರ ಮೂಲಕ ಜನಸೇವೆಯನ್ನು ಮಾಡಬೇಕಿದೆ ಎಂದು ರೋಟರಿ ಕ್ಲಬ್ ಚಿನ್ಮೂಲಾದ್ರಿಯ ಜಿಲ್ಲಾ ಗೌರ್ನರ್ ಆದ ಮಾಣಿಕ್ಯ ಪವಾರ್ ಕ್ಲಬ್‌ನ ಪದಾಧಿಕಾರಿಗಳಿಗೆ ಕರೆ ನೀಡಿದರು.



ನಗರದ ಎಸ್.ಬಿ.ಆರ್.ಎಂ ರೋಟರಿ ಬಾಲಭವನದಲ್ಲಿ ಭಾನುವಾರ ಸಂಜೆ ರೋಟರಿ ಕ್ಲಬ್ ಚಿನ್ಮೂಲಾದ್ರಿಗೆ ಬೇಟಿ ನೀಡಿದ್ದ ಜಿಲ್ಲಾ ಗೌರ್ನರ್ ರವರ ಸಂಬಂಧ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಕ್ಲಬ್ ಜನೋಪಯೋಗಿಯಾದ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕಿದೆ. ಜನರಿಗೆ ಅಗತ್ಯವಾದ ಆರೋಗ್ಯ ತಪಾಸಣಾ ಶಿಬಿರ, ಶಿಕ್ಷಣದ ಬಗ್ಗೆ ಮಾಹಿತಿ, ರಕ್ತದಾನ ಶಿಬಿರ, ಸೇರಿದಂತೆ ಕ್ಲಬ್‌ನಿಂದ ದೊರೆಯಬಹುದಾದ ಇತರೆ ಮಾಹಿತಿಯನ್ನು ನೀಡುವುದರ ಮೂಲಕ ಅವರನ್ನು ಕ್ಲಬ್‌ನ ಸದಸ್ಯರನ್ನಾಗಿ ಮಾಡಬೇಕಿದೆ ಇದರಿಂದಾಗಿ ನಾಯಕತ್ವ ಬೆಳೆಯುತ್ತದೆ ಎಂದರು.

ಕ್ಲಬ್‌ವತಿಯಿಂದ ಮಾಡಿದಂತಹ ಕಾರ್ಯಕ್ರಮಗಳ ಮಾಹಿತಿಯನ್ನು ಕ್ಲಬ್‌ನ ಕೇಂದ್ರ ಕಛೇರಿಗೆ ಕಳುಹಿಸುವುದನ್ನು ಮರೆಯಬಾರದು. ರೋಟರಿ ಕ್ಲಬ್ ಚಿನ್ಮೂಲಾದ್ರಿ ಏನು ಮಾಡುತ್ತಿದೆ ಎಂಬುದನ್ನು ಜನತೆ ತಿಳಿಯಬೇಕಿದೆ. ಇದಕ್ಕೆ ಬೇಕಾದ ಎಲ್ಲಾ ರೀತಿಯ ಸಹಕಾರ ಮತ್ತು ಸಹಾಯವನ್ನು ಕ್ಲಬ್‌ನವರು ಮಾಡಬೇಕಿದೆ. ಇಂದಿನ ಸಮಾಜಿಕ ಜಾಲ ತಾಣಗಳನ್ನು ಉಪಯೋಗ ಮಾಡಿಕೊಂಡು ಪ್ರಚಾರ ಮಾಡಬೇಕಿದೆ. ಈ ಸಂಸ್ಥೆ ನಿಸ್ವಾರ್ಥವಾಗಿ ಸಮಾಜದ ವಿವಿಧ ರೀತಿಯ ಕೆಲಸವನ್ನು ಮಾಡುತ್ತಿದೆ. ಬಡವರಿಗೆ ತಮ್ಮ ಕೈಲಾದ ಸಹಾಯವನ್ನು ಸಹಾ ಮಾಡಬೇಕಿದೆ ಎಂದು ಮಾಣಿಕ್ಯ ಪವಾರ್ ಕರೆ ನೀಡಿದರು.

ಅಸಿಸ್ಟೆಂಟ್ ಗೌರ್ನರ್ ಆದ ಉಮೇಶ್ ತುಪ್ಪದ್ ಮಾತನಾಡಿ, ಕ್ಲಬ್ ಗಳಿಗೆ ಜಿಲ್ಲಾ ಗೌರ್ನರ್ ಬೇಟಿ ಮಾಡುವುದು ಅಲ್ಲಿನ ಕಾಗದ ಪತ್ರ ಮತ್ತು ಮಾಡಿದಂತಹ ಕಾರ್ಯಕ್ರಮಗಳ ವರದಿಯನ್ನು ನೋಡುವುದು ಸಾಮಾನ್ಯವಾದ ಕೆಲಸವಾಗಿದೆ.

ಈಹಿನ್ನಲೆಯಲ್ಲಿಕ್ಲಬ್‌ನಪದಾಧಿಕಾರಿಗಳು ತಾವು ಮಾಡಿದ ಕೆಲಸದ ಮಾಹಿತಿಯನ್ನು ಸರಿಯಾದ ರೀತಿಯಲ್ಲಿ ಸಂಗ್ರಹ ಮಾಡಿಕೊಂಡಿರಬೇಕು. ಈ ವಿಷಯದ ಬಗ್ಗೆ ಚರ್ಚೆಯಾಗಬೇಕಿದೆ. ಆರೋಗ್ಯ ಶಿಕ್ಷಣ ಸಮಾಜಿಕ ಕಳಕಳಿಯ ಬಗ್ಗೆ ಹೆಚ್ಚಿನ ಒತ್ತನ್ನು ನೀಡಬೇಕಿದೆ. ಕಾರ್ಯಕ್ರಮ ಮಾಡುವುದು ಒಂದು ಕೆಲಸವಾದರೆ ಅವುಗಳನ್ನು ಸರಿಯಾದ ರೀತಿಯಲ್ಲಿ ದಾಖಲೆಗಳನ್ನು ಇಟ್ಟುಕೊಳ್ಳುವುದು ಅಗತ್ಯವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಕ್ಲಬ್ ಅಧ್ಯಕ್ಷ ಶಂಕರಪ್ಪ, ಕಾರ್ಯದರ್ಶಿ ಲಕ್ಷ್ಮೀಕಾಂತ್ ಭಾಗವಹಿಸಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T